₹ 4 | ಪುಟ: 4 | ಸಂಪುಟ: 4 | ಸಂಚಿಕೆ 51 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 | Issue: 51 | Saturday, 08, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಮತ್ತೆ ಕೊರೋನಾ ಹೆಚ್ಚಳ: ಎಚ್ಚರಿಕೆ ವಹಿಸುವಂತೆ ರಾಜ್ಯಗಳಿಗೆ ಕೇಂದ್ರ ಸೂಚನೆ



ನವದೆಹಲಿ: ದೇಶದಲ್ಲಿ ಮತ್ತೆ ಕೊರೋನಾ ವೈರಸ್ ಪಾಸಿಟಿವ್ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶುಕ್ರವಾರ ಪರಿಶೀಲನಾ ಸಭೆ ನಡೆಸಿದ ಕೇಂದ್ರ ಆರೋಗ್ಯ ಸಚಿವ ಮನ್ಸುಖ್ ಮಾಂಡವಿಯಾ ಅವರು, ರಾಜ್ಯ ಸರ್ಕಾರಗಳು ಕೋವಿಡ್ ಸೂಕ್ತ ನಿರ್ವಹಣೆಗೆ ಸಿದ್ಧರಾಗಬೇಕು ಮತ್ತು ಎಚ್ಚರ ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

ವರ್ಚುವಲ್ ಮೂಲಕ ರಾಜ್ಯ ಆರೋಗ್ಯ ಸಚಿವರು ಮತ್ತು ಪ್ರಧಾನ ಹಾಗೂ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳೊಂದಿಗಿನ ಸಭೆ ನಡೆಸಿದ ಮಾಂಡವಿಯಾ ಅವರು, ಐಎಲ್ಐ ಮತ್ತು ತೀವ್ರತರವಾದ ಉಸಿರಾಟದ ಸೋಂಕಿನ (ಎಸ್ಎಆರ್ಐ) ಪ್ರಕರಣಗಳ ಮೇಲ್ವಿಚಾರಣೆ ಮಾಡುವ ಮೂಲಕ ತುರ್ತು ಹಾಟ್‌ಸ್ಪಾಟ್‌ಗಳನ್ನು ಗುರುತಿಸಬೇಕು. ಕೋವಿಡ್ ಪರೀಕ್ಷೆ ಮತ್ತು ಲಸಿಕೆ ನೀಡುವುದನ್ನು ಹೆಚ್ಚಿಸುವಂತೆ ಹಾಗೂ ಆಸ್ಪತ್ರೆಯ ಮೂಲಸೌಕರ್ಯಗಳನ್ನು ಸಿದ್ಧಪಡಿಸಿಕೊಳ್ಳುವಂತೆ ಸೂಚಿಸಿದ್ದಾರೆ.

ಕೋವಿಡ್–19 ತಡೆಗಟ್ಟುವಿಕೆ ಮತ್ತು ನಿರ್ವಹಣೆಗಾಗಿ ಈ ಹಿಂದೆ ಕೋವಿಡ್ ಉಲ್ಬಣದ ಸಮಯದಲ್ಲಿ ಮಾಡಿದಂತೆ ಕೇಂದ್ರ ಮತ್ತು ರಾಜ್ಯಗಳು ಸಹಕಾರ ಮನೋಭಾವದಿಂದ ಕೆಲಸ ಮಾಡುವುದನ್ನು ಮುಂದುವರಿಸಬೇಕಾಗಿದೆ ಎಂದು ಮಾಂಡವಿಯಾ ಹೇಳಿದರು.

ಏಪ್ರಿಲ್ 10 ಮತ್ತು 11 ರಂದು ಎಲ್ಲಾ ಆಸ್ಪತ್ರೆಗಳ ಮೂಲಸೌಕರ್ಯಗಳ ಕುರಿತು ಅಣಕು ಪ್ರದರ್ಶನ ನಡೆಸಬೇಕು ಮತ್ತು ಏಪ್ರಿಲ್ 8 ಮತ್ತು 9 ರಂದು ಜಿಲ್ಲಾಡಳಿತ ಹಾಗೂ ಆರೋಗ್ಯ ಅಧಿಕಾರಿಗಳೊಂದಿಗೆ ಆರೋಗ್ಯ ಸಿದ್ಧತೆಯನ್ನು ಪರಿಶೀಲಿಸಬೇಕು ಎಂದು ಅವರು ರಾಜ್ಯಗಳ ಆರೋಗ್ಯ ಸಚಿವರಿಗೆ ಸೂಚಿಸಿದರು.

# ಪ್ರಜಾಪ್ರಭುತ್ವವಲ್ಲ, ಜಾತಿವಾದ, ಕುಟುಂಬವಾದ ಅಪಾಯದಲ್ಲಿರೋದು

# ರಾಹುಲ್ ಗಾಂಧಿಗೆ ಟಾಂಗ್ ಕೊಟ್ಟ ಅಮಿತ್ ಶಾ

ನವದೆಹಲಿ: ಪ್ರಜಾಪ್ರಭುತ್ವವಲ್ಲ. ಜಾತಿವಾದ, ಕುಟುಂಬವಾದ ಅಪಾಯದಲ್ಲಿರೋದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಟಾಂಗ್ ಕೊಟ್ಟಿದ್ದಾರೆ.

ಕೌಶಂಬಿ ಹಬ್ಬದ ಸಂದರ್ಭದಲ್ಲಿ ಉತ್ತರ ಪ್ರದೇಶದಲ್ಲಿ ಗೃಹ ಸಚಿವ ಅಮಿತ್ ಶಾ ಅವರು ಕೋಟ್ಯಂತರ ಮೌಲ್ಯದ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಮಾಡಿದರು. ಉತ್ಸವವನ್ನು ಉದ್ಘಾಟಿಸಿದ ಬಳಿಕ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ರಾಹುಲ್ ಗಾಂಧಿ ಅವರನ್ನು ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಳಿಸಿದ ಬಗ್ಗೆ ಸಂಸತ್ತಿನ ಕಲಾಪಕ್ಕೆ ಅಡ್ಡಿಪಡಿಸಿದ ವಿರೋಧ ಪಕ್ಷಗಳನ್ನು ದೇಶ



ಕ್ಷಮಿಸುವುದಿಲ್ಲ ಎಂದು ಪ್ರತಿಪಾದಿಸಿದರು.


ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಪ್ರೋಗ್ರೆಸ್ಸಿವ್ ಅಲೈಯನ್ಸ್ (ಸರ್ಕಾರ) ತಂದ ಕಾನೂನಿನ ಆಧಾರದ ಮೇಲೆ ಗಾಂಧಿ ಅವರನ್ನು ಸಂಸತ್ ಸದಸ್ಯತ್ವದಿಂದ ಅನರ್ಹಗೊಳಿಸಲಾಗಿದೆ ಎಂದು ಅಮಿತ್ ಶಾ ಹೇಳಿದರು. ಸಮಾಜದ ಎಲ್ಲಾ ವರ್ಗಗಳ ಸರ್ವತೋಮುಖ ಕಲ್ಯಾಣಕ್ಕಾಗಿ 2024ರಲ್ಲಿ ಮತ್ತೊಮ್ಮೆ ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡಬೇಕೆಂದು ಶಾ ಜನರಿಗೆ ಕರೆ ನೀಡಿದರು.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಉಪ ಮುಖ್ಯಮಂತ್ರಿಗಳಾದ ಕೇಶವ್ ಪ್ರಸಾದ್ ಮೌರ್ಯ ಮತ್ತು ಬ್ರಜೇಶ್ ಪಾಠಕ್ ಮತ್ತು ಭಾರತೀಯ ಜನತಾ ಪಕ್ಷದ (ಬಿಜೆಪಿ) ರಾಜ್ಯ ಘಟಕದ ಅಧ್ಯಕ್ಷ ಭೂಪೇಂದ್ರ ಚೌಧರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಾನನಷ್ಟ ಮೊಕದ್ದಮೆಯಲ್ಲಿ ಸೂರತ್ ನ್ಯಾಯಾಲಯವು ಎರಡು ವರ್ಷಗಳ ಶಿಕ್ಷೆ ವಿಧಿಸಿದ ನಂತರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಮಾರ್ಚ್ 24 ರಂದು ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಳಿಸಲಾಯಿತು.

ದೇಶದ ಬಜೆಟ್ ಅಧಿವೇಶನದ ಬಗ್ಗೆ ಚರ್ಚೆ ನಡೆಸದೆ ಸಂಸತ್ತಿನ ಕಲಾಪವನ್ನು ಅಂತ್ಯಗೊಳಿಸಿದ್ದು ಸ್ವಾತಂತ್ರ್ಯದ ಇತಿಹಾಸದಲ್ಲಿ ಎಂದೂ ನಡೆದಿರಲಿಲ್ಲ ಎಂದು ಅಮಿತ್ ಶಾ ಹೇಳಿದ್ದಾರೆ. ಪ್ರತಿಪಕ್ಷಗಳ ನಾಯಕರು ಸದನ ಕಲಾಪಕ್ಕೆ ಅವಕಾಶ ನೀಡಲಿಲ್ಲ. ಇದಕ್ಕೆ ಕಾರಣ ರಾಹುಲ್ ಗಾಂಧಿ ಅವರನ್ನು ಅನರ್ಹತೆ ಎಂದು ಅಮಿತ್ ಶಾ ಹೇಳಿದ್ದಾರೆ.

## ಶಸ್ತ್ರ ಚಿಕಿತ್ಸೆಗೆ ಲಂಚದ ಬೇಡಿಕೆಯಿಟ್ಟ ವೈದ್ಯ ಲೋಕಾಯುಕ್ತ ಬಲೆಗೆ




ಹಾವೇರಿ: ಸಂತಾನಶಕ್ತಿ ಹರಣ ಶಸ್ತ್ರ ಚಿಕಿತ್ಸೆ ಮಾಡಲು ರೂ 4 ಸಾವಿರ ಲಂಚದ ಬೇಡಿಕೆ ಇಟ್ಟಿದ್ದ ಹಾವೇರಿ ಜಿಲ್ಲಾಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ.ಉಮೇಶ ಕೆಳಗಿನಮನಿ ಹಾಗೂ ಹೊಮ್ಮರಡಿ ಗ್ರಾಮದ ಆಶಾ ಕಾರ್ಯಕರ್ತೆ ದಾಕ್ಷಾಯಿಣಿ ಚಿಕ್ಕನಂದಿ ಎಂಬುವರು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ವೀರೇಶ ಹಾದರಗೇರಿ ಅವರ ಪತ್ನಿ ವಿಜಯಲಕ್ಷ್ಮಿ ಮತ್ತು ಸಂಬಂಧಿ ಲಕ್ಷ್ಮಿ ಅವರಿಗೆ ಸಂತಾನಶಕ್ತಿ ಹರಣ ಶಸ್ತ್ರ ಚಿಕಿತ್ಸೆ ಮಾಡಲು ವೈದ್ಯ ಡಾ.ಉಮೇಶ್ ರೂ 4 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. 2 ಸಾವಿರವನ್ನು ಮುಂಗಡವಾಗಿ ಪಡೆದುಕೊಂಡು, ಉಳಿದ 2 ಸಾವಿರ ಲಂಚವನ್ನು ಪಡೆಯುವಾಗ ಲೋಕಾಯುಕ್ತ ಪೊಲೀಸರು ಯಶಸ್ವಿಯಾಗಿ ಆರೋಪಿಗಳನ್ನು ಬಂಧಿಸಿದ್ದಾರೆ.

ಹೊಸರಿತ್ತಿಯಲ್ಲಿರುವ ಡಾ.ಉಮೇಶ ಅವರ ಮನೆಯಲ್ಲೂ ಲೋಕಾಯುಕ್ತ ಪೊಲೀಸರು ಶೋಧ ಕಾರ್ಯ ನಡೆಸಿದ್ದಾರೆ.

ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದು, ತನಿಖೆ ಮುಂದುವರಿದಿದೆ' ಎಂದು ಲೋಕಾಯುಕ್ತ ಡಿವೈಎಸ್ಪಿ ಚಂದ್ರಶೇಖರ್ ಬಿ.ಪಿ. ಮಾಹಿತಿ ನೀಡಿದ್ದಾರೆ.

## ನನ್ನ ವಿರುದ್ಧ ಯಾರು ಬೇಕಾದರೂ ಬನ್ನಿ: ಬೊಮ್ಮಾಯಿ ಗುಡುಗು



ಹಾವೇರಿ: ಚುನಾವಣೆ ಹತ್ತಿರವಾಗುತ್ತಿದ್ದಂತೆ ತಮ್ಮ ಸ್ವಕ್ಷೇತ್ರ ಶಿಗ್ಗಾಂವಿಯಲ್ಲಿ ಮುಖ್ಯಮಂತ್ರಿ ಬಸವರಾಜ.ಬೊಮ್ಮಾಯಿ ಕಾಂಗ್ರೆಸ್ ವಿರುದ್ಧ ಗುಡುಗಿದ್ದಾರೆ. 'ಯಾರು ಬೇಕಾದರೂ ಬನ್ನಿ' ಎನ್ನುವ ಮೂಲಕ ಕಾಂಗ್ರೆಸ್‌ಗೆ ಪಂಥಾಹ್ವಾನ ನೀಡಿದ್ದಾರೆ. ಶಿಗ್ಗಾಂವಿಯಲ್ಲಿ ಶುಕ್ರವಾರ ನಡೆದ ಕಾರ್ಯಕರ್ತರ ಸಮಾವೇಶದಲ್ಲಿ ಅವರು ವಾಗ್ದಾಳಿ ನಡೆಸಿದರು. ಇದೇ ಸಂದರ್ಭದಲ್ಲಿ 20 ಕಾಂಗ್ರೆಸ್ ಮುಖಂಡರು ಬಿಜೆಪಿಗೆ ಸೇರ್ಪಡೆಯಾದರು.

ವಿನಯ ಕುಲಕರ್ಣಿ ಹೆಸರು ಧಾರವಾಡ ಗ್ರಾಮೀಣಕ್ಕೆ ಘೋಷಣೆಯಾಗುತ್ತಿದ್ದಂತೆ ಶುಕ್ರವಾರ ಶಿಗ್ಗಾಂವಿಯಲ್ಲಿ ಕಾರ್ಯಕರ್ತರ ಸಭೆ ನಡೆಸಿದ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಕೈ ನಾಯಕರನ್ನು ಕೆರಳಿಸಿದ್ದಾರೆ. ಶಿಗ್ಗಾವಿಯಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಸ್ಥಳೀಯ ಕೈ ಮುಖಂಡರನ್ನು

ಬಿಜೆಪಿಗೆ ಸೆಳೆಯುವ ಮೂಲಕ ಕೈ ಪಡೆಗೆ ಬಂದ ಬಿಗ್ ಶಾಕ್ ನೀಡಿದ್ದಾರೆ.

ಕೆಲವರು ಕ್ಷೇತ್ರದ.ಹುಡುಕಾಟದಲ್ಲಿದ್ದಾರೆ. ನಾನು ಶಿಗ್ಗಾಂವಿಯಿಂದಲೇ ಸ್ಪರ್ಧೆ ಮಾಡುತ್ತೇನೆ" ಎಂದು ಸಿದ್ದರಾಮಯ್ಯ ವಿರುದ್ಧ ಹರಿಹಾಯ್ದರು. ಅವಿರೋಧ ಆಯ್ಕೆ ನನಗಿಷ್ಟ ಇಲ್ಲ. ತಮ್ಮನ್ನು ಶಿಗ್ಗಾಂವಿಯಲ್ಲಿ ಕಟ್ಟಿ ಹಾಕಲು ಕಾಂಗ್ರೆಸ್ ನಾಯಕರು ಹೆಣೆದಿದ್ದ ತಂತ್ರ ಅರಿತಿದ್ದ ಬೊಮ್ಮಾಯಿ, ಶಿಗ್ಗಾಂವಿಯ ಕುಸ್ತಿ ಅಖಾಡಕ್ಕೆ ಯಾರು ಬೇಕಾದರೂ ಬನ್ನಿ, ನಾನು ಸಿದ್ದನಿದ್ದೇನೆ, ಅವಿರೋಧ ಆಯ್ಕೆ ನನಗಿಷ್ಟವಿಲ್ಲ, ನನಗೆ ಕುಸ್ತಿ ಬೇಕು, ಸೆಡ್ಡು ಹೊಡೆದಾಗಲೇ ಯಾರ ಶಕ್ತಿ ಎಷ್ಟು ಎನ್ನುವುದು ಗೊತ್ತಾಗಲಿದೆ. ಕುಸ್ತಿಗೆ ಬರುವಾಗ ಹೊಸ ಪಟ್ಟುಗಳನ್ನು ಕಲಿತುಕೊಂಡು ಬನ್ನಿ ಎಂದು ಸವಾಲು ಹಾಕಿದ್ದಾರೆ.

## ಪ್ರಧಾನಿ ಮೋದಿ, ಉತ್ತರ ಪ್ರದೇಶ ಸಿಎಂಗೆ ಕೊಲೆ ಬೆದರಿಕೆ: ಶಾಲಾ ಬಾಲಕನ ಬಂಧನ



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಹತ್ಯೆ ಮಾಡುವುದಾಗಿ ಬೆದರಿಕೆ ಹಾಕಿ ಮಾಧ್ಯಮ ಸಂಸ್ಥೆಗೆ ಇಮೇಲ್ ಕಳುಹಿಸಿದ ಆರೋಪದ ಮೇಲೆ ಲಖನೌದ ಶಾಲಾ ಬಾಲಕನನ್ನು ನೋಯ್ಡಾ ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಿಹಾರ ಮೂಲದ 16 ವರ್ಷದ ಬಾಲಕನನ್ನು ಇಂದು ಬೆಳಗ್ಗೆ ಲಖನೌದ ಚಿನ್ಹಾಟ್ ಪ್ರದೇಶದಲ್ಲಿ ವಶಕ್ಕೆ ಪಡೆದು, ನೋಯ್ಡಾಗೆ ಕರೆತರಲಾಗಿದೆ ಎಂದು ಸಹಾಯಕ ಪೊಲೀಸ್ ಆಯುಕ್ತ(ನೋಯ್ಡಾ) ರಜನೀಶ್ ವರ್ಮಾ ಹೇಳಿದ್ದಾರೆ.

ಎಪ್ರಿಲ್ 5 ರಂದು ಇಲ್ಲಿನ ಸೆಕ್ಟರ್ 20 ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಎಫ್ಐಆರ್ ದಾಖಲಿಸಲಾಗಿದೆ. ನಂತರ ಈ ಕುರಿತು ತನಿಖೆ ಮಾಡಲಾಯಿತು ಮತ್ತು ಬೆದರಿಕೆ ಸಂದೇಶವನ್ನು ಒಳಗೊಂಡಿರುವ ಇಮೇಲ್ ಕಳುಹಿಸಿದವರನ್ನು ಪತ್ತೆಹಚ್ಚಲು ತಾಂತ್ರಿಕ ತಂಡಗಳನ್ನು ರಚಿಸಲಾಯಿತು" ಎಂದು ವರ್ಮಾ ತಿಳಿಸಿದ್ದಾರೆ.

ತನಿಖೆಯ ಆಧಾರದ ಮೇಲೆ, ಇಮೇಲ್ ಕಳುಹಿಸಿದವರನ್ನು ಲಖನೌನ ಚಿನ್ಹಾಟ್ ಪ್ರದೇಶದಲ್ಲಿ ಪತ್ತೆಹಚ್ಚಲಾಗಿದೆ ಮತ್ತು ವಶಕ್ಕೆ ಪಡೆಯಲಾಗಿದೆ. ಕೊಲೆ ಬೆದರಿಕೆ ಸಂದೇಶ ಕಳುಹಿಸಿದ್ದು ಶಾಲಾ ಬಾಲಕ ಎಂದು ತಿಳಿದುಬಂದಿದೆ. ಈ ಬಾಲಕ 11ನೇ ತರಗತಿ ಪೂರ್ಣಗೊಳಿಸಿದ್ದು, 12ನೇ ತರಗತಿಗೆ ಪ್ರವೇಶ ಪಡೆದಿದ್ದಾನೆ" ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

## ರೌಡಿ ಶೀಟರ್ ಫಯಾಜ್ ಚೌಟಿ ಜೊತೆ ಸ್ಪೀಕರ್ ಕಾಗೇರಿ ಸಭೆ: ಫೋಟೋ ವೈರಲ್

ಶಿರಸಿ: ದರೋಡೆ, ಬ್ಲ್ಯಾಕ್ ಮೇಲ್, ಅಪಹರಣ ಸೇರಿದಂತೆ ಹಲವು ಪ್ರಕರಣದ ಆರೋಪಿಯಾಗಿರುವ ರೌಡಿ ಶೀಟರ್ ಫಯಾಜ್ ಚೌಟಿ ಜೊತೆಗೆ ವಿಧಾನಸಭೆ ಅಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಇತ್ತೀಚಿಗೆ ಸಭೆ ನಡೆಸಿರುವ ಫೋಟೋ ವೈರಲ್ ಆಗುತ್ತಿದೆ.

ಫಯಾಜ್ ಚೌಟಿ ಭೂಗತ ಪಾತಕಿ ಹೆಬ್ಬೆಟ್ಟು ಮಂಜ ಸೇರಿದಂತೆ ಅನೇಕರೊಂದಿಗೆ ಸಂಪರ್ಕದಲ್ಲಿದ್ದಾನೆ. ಆದರೆ, ಐದು ದಿನಗಳ ಹಿಂದೆ ಚೌಟಿ ಸ್ಪೀಕರ್ ಕಾಗೇರಿ ಪಕ್ಕದಲ್ಲೇ ಕುಳಿತು ಸಭೆ ನಡೆಸಿರುವುದು ಅನೇಕ ಅನುಮಾನಗಳಿಗೆ ಕಾರಣವಾಗಿದೆ.

ಕ್ಷೇತ್ರದ ಯಾವುದೋ ಸಮಸ್ಯೆ ಇಟ್ಟುಕೊಂಡು ರೌಡಿ ಶೀಟರ್ ಚೌಟಿ ಬಳಿ ಚರ್ಚೆಗೆ ಬಂದಿದ್ದರು




ಎಂದು ಕಾಗೇರಿ ಕಚೇರಿ ಮೂಲಗಳು ತಿಳಿಸಿವೆ. ಆದರೆ, ಚುನಾವಣೆ ಸಂದರ್ಭದಲ್ಲಿ ಆಪ್ತನಂತೆ ಕಾಗೇರಿ ಅಕ್ಕಪಕ್ಕದಲ್ಲಿಯೇ ಕುಳಿತು ಚೌಟಿ ಸಭೆ ನಡೆಸಿರುವುದು ಕ್ಷೇತ್ರದ ಜನರಲ್ಲಿ ತೀವ್ರ ಅಚ್ಚರಿ ಮೂಡಿಸಿದೆ.

ಇನ್ನೂ ಸಭೆಯ ಎರಡು ದಿನದ ನಂತರ ಹಂದಿ ಅಣ್ಣಿ ಕೊಲೆ ಆರೋಪಿಗಳನ್ನು ತನ್ನ ಆಂಬ್ಯುಲೆನ್ಸ್ ನಲ್ಲಿ ಎಸ್ಕೆಪ್ ಮಾಡಿಸಿದ ಆರೋಪದಡಿ 2 ದಿನಗಳ ಹಿಂದೆಯಷ್ಟೇ ದಾವಣಗೆರೆ ಪೊಲೀಸರಿಂದ ಬಂಧನವಾಗಿರುವುದಾಗಿ ತಿಳಿದುಬಂದಿದೆ.

## ಕರ್ನಾಟಕ ಚುನಾವಣೆ: ಅಭ್ಯರ್ಥಿಗಳ ಅಂತಿಮಗೊಳಿಸಲು ಏ.9 ಬಿಜೆಪಿ ಕೇಂದ್ರೀಯ ಚುನಾವಣಾ ಸಮಿತಿ ಸಭೆ

ನವದೆಹಲಿ: ಕರ್ನಾಟಕ ವಿಧಾನಸಭಾ ಚುನಾವಣೆಯ ಅಭ್ಯರ್ಥಿ ಗಳನ್ನು ಅಂತಿಮಗೊಳಿಸಲು ಏಪ್ರಿಲ್ 9 ರಂದು ಬಿಜೆಪಿ ಕೇಂದ್ರ ಕಚೇರಿಯಲ್ಲಿ ಪಕ್ಷದ ಕೇಂದ್ರೀಯ ಚುನಾವಣಾ ಸಮಿತಿ ಸಭೆ ನಡೆಯುವ ಸಾಧ್ಯತೆಯಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಈ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ. ಪಿ. ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ಎಲ್.



ಸಂತೋಷ್ ಮತ್ತು ಪಕ್ಷದ ಕೇಂದ್ರ ಚುನಾವಣಾ ಸಮಿತಿ ಸದಸ್ಯರು ಪಾಲ್ಗೊಳ್ಳಲಿದ್ದಾರೆ.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಮೂವರ ಹೆಸರಿರುವ ಪಟ್ಟಿಯನ್ನು ರಾಜ್ಯ ಬಿಜೆಪಿ ಕಳುಹಿಸಿದ್ದು, ಈ ಪಟ್ಟಿ ಕುರಿತು ಕೇಂದ್ರ ಚುನಾವಣಾ ಸಮಿತಿ ಪರಿಶೀಲನೆ ನಡೆಸಲಿದೆ. ಬಳಿಕ ಪಕ್ಷದ ವರಿಷ್ಠರು ಅಭ್ಯರ್ಥಿಗಳನ್ನು ಅಂತಿಮಗೊಳಿಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಏಪ್ರಿಲ್ 4 ರಂದು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್, ರಾಜ್ಯ ಬಿಜೆಪಿ ಉಸ್ತುವಾರಿ ಧರ್ಮೇಂದ್ರ ಪ್ರಧಾನ್, ಸಹ ಉಸ್ತುವಾರಿ ಮನ್ಸುಖ್ ಮಾಂಡವೀಯಾ, ಕೇಂದ್ರೀಯ ಚುನಾವಣಾ ಸಮಿತಿ ಸದಸ್ಯ ಅಣ್ಣಾಮಲೈ, ಮಾಜಿ ಉಪ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಹಾಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪಾಲ್ಗೊಂಡಿದ್ದ ಸಭೆಯಲ್ಲಿ ಪಕ್ಷದ ಅಭ್ಯರ್ಥಿಗಳ ಕಿರುಪಟ್ಟಿ ಅಂತಿಮಗೊಳಿಸಲಾಗಿದೆ ಎನ್ನಲಾಗಿದೆ.

## ಮುಖ್ಯಮಂತ್ರಿ ಸ್ಥಾನಕ್ಕೆ ನಾನು ಸಹಾ ಆಕ್ಷಾಂಕ್ಷಿ: ಎಂ.ಬಿ.ಪಾಟೀಲ



ದೆಹಲಿ: ಕಾಂಗ್ರೆಸ್ ಪಕ್ಷದಲ್ಲಿ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ನಡುವೆ ಮುಖ್ಯಮಂತ್ರಿ ಸ್ಥಾನಕ್ಕೆ ಈಗಲೇ ಕಚ್ಚಾಟ ನಡೆದಿದೆ. ಈ ನಡುವೆ ಪಕ್ಷದ ಇತರ ನಾಯಕರು ತಾವು ಸಹ ಮುಖ್ಯಮಂತ್ರಿಯ ಸ್ಥಾನದ ಆಕಾಂಕ್ಷಿಗಳು ಎಂದು ಪದೇ ಪದೇ ಹೇಳುತ್ತಿದ್ದಾರೆ. ಲಿಂಗಾಯತ ಕೋಟಾದಡಿ ಹಿರಿಯ ನಾಯಕ ಎಂ.ಬಿ. ಪಾಟೀಲ ತಾವು ಸಹ ಮುಖ್ಯಮಂತ್ರಿ ಆಗುವುದಾಗಿ ಹಲವು ಬಾರಿ ಹೇಳಿಕೊಂಡಿದ್ದರು. ಈಗ ಮತ್ತೊಮ್ಮೆ ಈ ವಿಚಾರವನ್ನು ಅವರು ಪುನರುಚ್ಚರಿಸಿದ್ದಾರೆ.ನಾನು ಸಹ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿ ಎಂದು ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಚಾರ ಸಮಿತಿಯ ಅಧ್ಯಕ್ಷರು ಆಗಿರುವ ಅವರು, ಈ ಬಗ್ಗೆ ಪ್ರತಿಕ್ರಿಯೆ ನೀಡಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಮಾತ್ರವಲ್ಲ. ಹಲವರು ಮುಖ್ಯಮಂತ್ರಿ ಆಗಲು ಅರ್ಹರಿದ್ದಾರೆ. ದಿನೇಶ್ ಗುಂಡೂರಾವ್, ಕೃಷ್ಣ ಬೈರೇಗೌಡ ಸಹ ಅರ್ಹರಾಗಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ಸಿದ್ದರಾಮಯ್ಯ ಪಕ್ಷದ ಉನ್ನತ ನಾಯಕರಾಗಿದ್ದಾರೆ. ನಾನು, ದಿನೇಶ್ ಗುಂಡೂರಾವ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ನಂತರದ ಸ್ಥಾನದಲ್ಲಿದ್ದೇವೆ. ಚುನಾವಣೆ ನಂತರ ಶಾಸಕಾಂಗ ಪಕ್ಷದ ನಾಯಕನನ್ನು ಆಯ್ಕೆ ಮಾಡಲಾಗುತ್ತದೆ. ಆನಂತರ ಪಕ್ಷ ತೀರ್ಮಾನ ಕೈಗೊಳ್ಳುತ್ತದೆ ಕಾಂಗ್ರೆಸ್ ನಲ್ಲಿ ಇದು ಮೊದಲಿನಿಂದಲೂ ಚಾಲ್ತಿಯಲ್ಲಿದೆ. ಈ ಸಲವು ಈ ಸಂಪ್ರದಾಯ ಮುಂದುವರಿಯಲಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗುವ ಮಹತ್ವಕಾಂಕ್ಷೆ ವ್ಯಕ್ತಪಡಿಸುವುದು ತಪ್ಪಲ್ಲ. ಆದರೆ ಮುಖ್ಯಮಂತ್ರಿ ಅಭ್ಯರ್ಥಿಯೆಂದು ಪಕ್ಷ ಯಾರನ್ನು ಬಿಂಬಿಸಿಲ್ಲ. ಸಾಮೂಹಿಕ ನಾಯಕತ್ವದಲ್ಲಿ ಚುನಾವಣೆ ಎದುರಿಸಲಾಗುತ್ತದೆ. ಲಿಂಗಾಯತರು ಈ ಬಾರಿ ಕಾಂಗ್ರೆಸ್ ಅನ್ನು ಸಂಪೂರ್ಣವಾಗಿ ಬೆಂಬಲಿಸಿದ್ದಾರೆ ಎಂದು ಅವರು ಹೇಳಿದರು.

ಚುನಾವಣೆಯಲ್ಲಿ ಲಿಂಗಾಯತರಿಗೆ ಪಕ್ಷ ಗರಿಷ್ಠ ಸ್ಥಾನ ನೀಡಲಿದೆ. 166 ಸ್ಥಾನಗಳ ಪೈಕಿ 43 ಕ್ಷೇತ್ರಗಳಲ್ಲಿ ಲಿಂಗಾಯತರನ್ನು ಕಣಕ್ಕಿಳಿಸಿದೆ ಎಂದು ತಿಳಿಸಿದರು.

## 54 ಅಡಿ ಎತ್ತರದ ಹನುಮಾನ ಮೂರ್ತಿಂ ಉದ್ಘಾಟಿಸಿದ ಅಮಿತ್ ಶಾ



ಅಹಮದಾಬಾದ್: ಹನುಮಾನ್ ಜಯಂತಿಯ ಶುಭ ಸಂದರ್ಭದಲ್ಲಿ ಗೃಹಮಂತ್ರಿ ಅಮಿತ್ ಶಾ ಗುಜರಾತಿನ ಬೋಟಾಡ್ ಜಿಲ್ಲೆಯ ಸಾರಂಗಪುರ ದೇವಸ್ಥಾನದಲ್ಲಿ 54 ಅಡಿ ಎತ್ತರದ ಭವ್ಯ ಹನುಮಾನ್ ಮೂರ್ತಿಯನ್ನು ಉದ್ಘಾಟಿಸಿದರು.

ತಮ್ಮ ಟ್ವೀಟ್ ಸರಣಿಗಳಲ್ಲಿ ಗೃಹಮಂತ್ರಿಗಳು 'ಪಂಚ ಧಾತುಗಳಿಂದ ಮಾಡಲ್ಪಟ್ಟ ಈ ಭವ್ಯ ಮೂರ್ತಿ ಭಾರತೀಯ ವಾಸ್ತು ಶಿಲ್ಪ ಮತ್ತು ಕಲೆಯ ಒಂದು ಅದ್ಭುತ ಉದಾಹರಣೆ. ಈ ಮೂರ್ತಿ ಮುಂದಿನ ದಿನಗಳಲ್ಲಿ ಭಕ್ತರಿಗೆ ಒಂದು ಶ್ರದ್ದೆಯ ಕೇಂದ್ರವಾಗಲಿದೆ' ಎಂದು ಹೇಳಿದ್ದಾರೆ.

ಕೇಸರಿನಂದನನ ಭವ್ಯ ಮಂದಿರಗಳಲ್ಲಿ ಒಂದಾದ ಗುಜರಾತಿನ ಸಾಲಂಗಪುರಧಾಮದಲ್ಲಿ ಮಹಾರಾಜಾಧಿರಾಜ ಆಂಜನೇಯನ ದರ್ಶನ ಪಡೆದು, ಜಗತ್ಪ್ರಸಿದ್ಧ ಶ್ರೀ ಕಷ್ಟಭಂಜನದೇವನ ಮಂದಿರದಲ್ಲಿ ಪ್ರಾರ್ಥನೆ ಸಲ್ಲಿಸಿದೆ. ಭಕ್ತರು ಬಜರಂಗಬಲಿಯ ಕಷ್ಟಭಂಜನ ರೂಪವನ್ನು ಬಹು ಶ್ರದ್ಧೆಯಿಂದ ಆರಾಧಿಸುತ್ತಾರೆ. ಸರ್ವರ ಕಲ್ಯಾಣಕ್ಕಾಗಿ ದೇವನನ್ನು ಪ್ರಾರ್ಥಿಸಿದೆ." ಎಂದು ಶಾ ಟ್ವೀಟ್ ಮಾಡಿದ್ದಾರೆ.

ಶಾ ಗುರುವಾರ ಸಾಲಂಗಪುರದಲ್ಲಿ 55 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಶ್ರೀ ಕಷ್ಟಭಂಜನದೇವ ಭೋಜನಾಲಯವನ್ನು ಕೂಡ ಉದ್ಘಾಟಿಸಿದರು. 25 ಯಾತ್ರಾ ಸ್ಥಳಗಳ ಮಣ್ಣಿನಿಂದ ನಿರ್ಮಾಣವಾದ ಈ ಹೈಟೆಕ್ ಕಿಚನ್ನಲ್ಲಿ ಒಂದು ಗಂಟೆಯಲ್ಲಿ 20,000 ಭಕ್ತಾದಿಗಳಿಗೆ ಆಹಾರ ತಯಾರಿಸಬಹುದು. 'ಇದೊಂದು ಶ್ರೀ ಕಷ್ಟಭಂಜನ ದೇವಸ್ಥಾನದ ಮಹತ್ವದ ಸಾರ್ವಜನಿಕ ಸೇವೆಯಾಗಿದೆ' ಎಂದು ತಮ್ಮ ಟ್ವೀಟ್ನಲ್ಲಿ ಶಾ ಹೇಳಿದರು.

## ಅಮುಲ್ ಉತ್ಪನ್ನ ಖರೀದಿಸದಿರಲು ಕನ್ನಡಿಗರೆಲ್ಲರೂ ಪ್ರತಿಜ್ಞೆ ಮಾಡಬೇಕು: ಸಿದ್ದರಾಮಯ್ಯ



ಬೆಂಗಳೂರು: ಐಸ್ ಕ್ರೀಮ್ ಸೇರಿದಂತೆ ಹಲವು ಉತ್ಪನ್ನಗಳನ್ನು ಬೆಂಗಳೂರಿನಲ್ಲಿ ಮಾರಾಟ ಮಾಡುತ್ತಿದ್ದ ಅಮುಲ್ , ಈಗ ಹಾಲು ಮತ್ತು ಮೊಸರು ಮಾರಾಟಕ್ಕೆ ಮುಂದಾಗಿದೆ. ಕ್ಲಿಕ್ ಕಾಮರ್ಸ್ ಪ್ಲಾಟ್ ಫಾರ್ಮ್ ಮೂಲಕ ಮನೆಗಳಿಗೆ ತಲುಪಿಸಲು ಹೊರಟಿದೆ. ಇದಕ್ಕೆ ವಿರೋಧ ವ್ಯಕ್ತಪಡಿಸಿರುವ ವಿಪಕ್ಷ ನಾಯಕ ಸಿದ್ದರಾಮಯ್ಯ, ಅಮುಲ್ ಉತ್ಪನ್ನ ಖರೀದಿಸುವುದಿಲ್ಲ ಎಂದು ಕನ್ನಡಿಗರೆಲ್ಲರೂ ಪ್ರತಿಜ್ಞೆ ಮಾಡಬೇಕು ಎಂದಿದ್ದಾರೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ನಾಡಿನ ರೈತರು, ರೈತರ ಹಿತರಕ್ಷಣೆಗಾಗಿ ಕಟ್ಟಿರುವ ಕೆಎಂಎಫ್ ನ ಕಬಳಿಕೆಯ ವಿರುದ್ಧ ಕನ್ನಡಿಗರೆಲ್ಲರೂ ಒಮ್ಮತದಿಂದ ವಿರೋಧಿಸಬೇಕು ಎಂದು ಕರೆ ನೀಡಿದ್ದಾರೆ. ಭಾಷಾದ್ರೋಹ ಮತ್ತು ನೆಲದ್ರೋಹದ ಜೊತೆಗೆ ಈಗ ಕೆಎಂಎಫ್ ಅನ್ನು ಮುಚ್ಚಿಸುವ ಮೂಲಕ ರೈತದ್ರೋಹ ಮಾಡಲು ರಾಜ್ಯ ಬಿಜೆಪಿ ಸರ್ಕಾರ ಹೊರಟಿದೆ ಎಂದು ಅವರು ಕಿಡಿಕಾರಿದ್ದಾರೆ.

ಕಳೆದ ಕೆಲವು ದಿನಗಳಿಂದ ರಾಜ್ಯದಲ್ಲಿ ನಂದಿನಿ ಹಾಲು ಮತ್ತು ಮೊಸರು ಮಾರುಕಟ್ಟೆಯಲ್ಲಿ ಮಾಯವಾಗುತ್ತಿದೆ. ಇದೇ ವೇಳೆ ಅಮುಲ್ ಉತ್ಪನ್ನಗಳ ಮಾರಾಟ ಭರದಿಂದ ಪ್ರಾರಂಭವಾಗಿದೆ. ಗುಜರಾತ್ ರಾಜ್ಯ ಅಮುಲ್ ಮೂಲಕ ಇಲ್ಲಿನ ರೈತರನ್ನು ಬೀದಿಗೆ ತಳ್ಳುವ ಪ್ರಯತ್ನ ಮಾಡುತ್ತಿದೆ. ಗೃಹ ಸಚಿವ ಅಮಿತ್ ಶಾ ಅವರ ನೇರ ಉಸ್ತುವಾರಿಯಲ್ಲಿಯೇ ಇವೆಲ್ಲ ನಡೆಯುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಕ್ಷಣ ತಕ್ಷಣ ಮಧ್ಯಪ್ರವೇಶಿಸಿ ಹಿಂಬಾಗಿಲಿನಿಂದ ಪ್ರವೇಶಿಸುತ್ತಿರುವ ಅಮುಲ್ ಸಂಸ್ಥೆಯನ್ನು ತಡೆಯಬೇಕಾಗಿದೆ. ಈ ಸಂಬಂಧ ಕೇಂದ್ರ ಗೃಹಸಚಿವರಾದ ಅಮಿತ್ ಶಾ ಅವರಿಗೆ ರಾಜ್ಯದ ಜನಾಭಿಪ್ರಾಯವನ್ನು ಗಮನಕ್ಕೆ ತಂದು ಈ ದ್ರೋಹ ಚಿಂತನೆಯನ್ನು ನಿಲ್ಲಿಸಬೇಕು ಎಂದು ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

# ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಮತದಾರರ ಪಟ್ಟಿ ಪರಿಷ್ಕರಣೆ ಮಾಡಬಹುದು: ಹೈಕೋರ್ಟ್

ಬೆಂಗಳೂರು: ಚುನಾವಣೆಗಳಿಗೆ ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಮತದಾರರ ಪಟ್ಟಿಯನ್ನು ಪರಿಷ್ಕರಣೆ ಮಾಡುವುದಕ್ಕೆ ಅವಕಾಶವಿದೆ ಎಂದು ಹೈಕೋರ್ಟ್ ಗುರುವಾರ ಹೇಳಿದೆ.

ತಮ್ಮ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಿದ್ದ ಚುನಾವಣಾ ಆಯೋಗದ ಕ್ರಮ ಪ್ರಶ್ನಿಸಿ ಬೆಂಗಳೂರಿನ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕ ರಿಜ್ವಾನ್ ಅಹರ್ಷದ್ ಸೇರಿದಂತೆ ಮತ್ತಿತರರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ವಿಚಾರಣೆ ನಡೆಸಿದರು.

ಈ ವೇಳೆ ಚುನಾವಣೆಗಳಿಗೆ ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಮತದಾರರ ಪಟ್ಟಿಯನ್ನು ಪರಿಷ್ಕರಣೆ ಮಾಡುವುದಕ್ಕೆ ಅವಕಾಶವಿದೆ ಎಂದು ಹೇಳಿತು. ಅಲ್ಲದೇ, ಶಾಸಕರ ಹೆಸರನ್ನೇ ಪಟ್ಟಿಯಿಂದ ತೆಗೆದು ಹಾಕುವ ಪ್ರಸಂಗಗಳು ಎದುರಾಗದಂತೆ ಕ್ರಮ ವಹಿಸಬೇಕು ಎಂದು ಕೇಂದ್ರ ಚುನಾವಣಾ ಆಯೋಗಕ್ಕೆ ಹೈಕೋರ್ಟ್ ಸೂಚನೆ ನೀಡಿತು.

ಪ್ರಜಾಪ್ರತಿನಿಧಿ ಕಾಯ್ದೆ 1950ರ ಸೆಕ್ಷನ್



22ರ ಪ್ರಕಾರ ಮತದಾರರ ಪಟ್ಟಿ ನಾಮ ನಿರ್ದೇಶನ ಮಾಡುವುದಕ್ಕಾಗಿ ಕೊನೆಯ ದಿನಾಂಕದವರೆಗೂ ತಿದ್ದುಪಡಿ ಮಾಡುವುದಕ್ಕೆ ಅನುಮತಿ ನೀಡುತ್ತದೆ. ಹೀಗಾಗಿ ಮತದಾರರ ಅಂತಿಮ ಪಟ್ಟಿ ಪ್ರಕಟದ ಆದ ನಂತರ ಪಟ್ಟಿಯನ್ನು ಮತ್ತಷ್ಟು ಪರಿಷ್ಕರಿಸಲು ಅವಕಾಶವಿಲ್ಲ ಎಂಬುದಾಗಿ ಅರ್ಜಿದಾರರ ವಾದವನ್ನು ನ್ಯಾಯಪೀಠ ತಳ್ಳಿ ಹಾಕಿತು. ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಿದ ನಂತರ ಸ್ಥಳಾಂತರಗೊಂಡವರು ಮತ್ತು ಮೃತಪಟ್ಟವರ ಹೆಸರನ್ನು ಪಟ್ಟಿಯಿಂದ ತೆಗೆದುಹಾಕುವುದಕ್ಕೆ ಚುನಾವಣಾ ಆಯೋಗಕ್ಕೆ ಅವಕಾಶವಿದೆ ಎಂದು ಹೇಳಿತು.

ಅಲ್ಲದೇ, ಮತದಾರರ ಪಟ್ಟಿಯಿಂದ ತಮ್ಮ ಹೆಸರು ಬಿಟ್ಟು ಹೋಗಿರುವ ವ್ಯಕ್ತಿಗಳು ಯಾವ ಸಂದರ್ಭದಲ್ಲಿ ಬೇಕಾದರೂ ತಮ್ಮ ಹೆಸರನ್ನು ನೋಂದಣಿ ಅಧಿಕಾರಿಯ ಮುಂದೆ ಅರ್ಜಿ ಸಲ್ಲಿಸಿ ಸೇರ್ಪಡೆ ಮಾಡಿಕೊಳ್ಳಬಹುದಾಗಿದೆ. ನಿರ್ದಿಷ್ಟ ಕ್ಷೇತ್ರದಲ್ಲಿ ನಾಮ ನಿರ್ದೇಶನ ಮಾಡುವುದು ಮತ್ತು ಅಂತಹ ಕ್ಷೇತ್ರದಿಂದ ವರ್ಗಾವಣೆ ಹಾಗೂ ಮತದಾರರ ಪಟ್ಟಿಯನ್ನು ತಿದ್ದುಪಡಿ ಮಾಡಬಹುದಾಗಿದೆ ಎಂದು ನ್ಯಾಯಪೀಠ ಅಭಿಪ್ರಾಯ ಪಟ್ಟಿತು.

ಶಿವಾಜಿನಗರ ವಿಧಾನ ಸಭಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಇತರ ಕ್ಷೇತ್ರಗಳಲ್ಲಿ ವಾಸಿಸುವ ಮತದಾರರ ಹೆಸರುಗಳು ಸೇರ್ಪಡೆಗೊಂಡಿವೆ ಎಂಬುದಾಗಿ ಈ ಹಿಂದೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಕೆಯಾಗಿತ್ತು. ಈ ಸಂಬಂಧ ನ್ಯಾಯಾಲಯದ ಸೂಚನೆ ಮೇರೆಗೆ ಚುನಾವಣಾ ಆಯೋಗ ಪತ್ರಿಕಾ ಪ್ರಕಟಣೆಯ ಹೊರಡಿಸಿತ್ತು. ಆಗ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್ ಅವರ ಹೆಸರು ಮತದಾರರ ಪಟ್ಟಿಯಿಂದ ಕಣ್ಮರೆಯಾಗಿತ್ತು. ಇದನ್ನು ಪ್ರಶ್ನಿಸಿ ರಿಜ್ವಾನ್ ಅರ್ಷದ್ ಸೇರಿದಂತೆ ಕ್ಷೇತ್ರದ ಮತದಾರರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ಪರಿಶೀಲನೆ ನಡೆಸಿದ ನ್ಯಾಯಾಲಯ ಈ ತೀಪು ನೀಡಿದೆ.

# ಏ.10ರಂದು ಗುಗ್ಗರಹಟ್ಟಿಯಲ್ಲಿ ಜೆಡಿಎಸ್ ಸಮಾವೇಶ: ಮೀನಳ್ಳಿ ತಾಯಣ್ಣ,ಮುನ್ನಾಭಾಯ್




ಬಳ್ಳಾರಿ: ಬಳ್ಳಾರಿ ನಗರದಲ್ಲಿ ಜೆಡಿ–ಎಸ್ ಪಕ್ಷದ ವತಿಯಿಂದ ಏ.10ರಂದು ಬಹಿರಂಗ ಸಮಾವೇಶವನ್ನು ಏರ್ಪಡಿಸಲಾಗಿದ್ದು, ಸಮಾವೇಶದಲ್ಲಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರು ಭಾಗವಹಿಸಲಿದ್ದಾರೆ ಎಂದು ಜೆಡಿ–ಎಸ್ ಮುಖಂಡ ಮೀನಳ್ಳಿ ತಾಯಣ್ಣ ಹೇಳಿದರು.

ಶುಕ್ರವಾರ ಬಳ್ಳಾರಿ ಜಿಲ್ಲಾ ಜೆಡಿಎಸ್ ಕಚೇ–ರಿಯಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದ ಅವರು, ಬಳ್ಳಾರಿಯಲ್ಲಿ ನಡೆಯಲಿರುವ ಬಹಿರಂಗ ಸಮಾವೇಶದಲ್ಲಿ 15 ರಿಂದ 20 ಸಾವಿರ ಜನ ಸೇರಲಿದ್ದಾರೆ, ಮಧ್ಯಾಹ್ನ 2 ಗಂಟೆಗೆ ಗುಗ್ಗರಹಟ್ಟಿಯ ಕೃಷ್ಣಾ ಕಾಲೋನಿಯಲ್ಲಿ ಸಮಾವೇಶ ನಡೆಯಲಿದೆ, ಅಂದು ಕುಮಾರಸ್ವಾಮಿ ಅವರು ಮುನ್ನಾಭಾಯ್ ಅವರನ್ನು ಬಳ್ಳಾರಿ ನಗರ ಅಭ್ಯರ್ಥಿ ಎಂದು ಘೋಷಿಸಲಿದ್ದಾರೆ ಎಂದು ತಿಳಿಸಿದರು.

ಬಳ್ಳಾರಿಯಿಂದ 3 ಜನ ಅಭ್ಯರ್ಥಿಗಳನ್ನು ಗೆಲ್ಲಿಸಲು ಶ್ರಮಿಸಲಿದ್ದೇವೆ ಎಂದು ಹೇಳಿದ ತಾಯಣ್ಣ, ಅದೇ ದಿನ ಸಂಜೆ ಕಂಪ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕುರುಗೋಡು ಪಟ್ಟಣದಲ್ಲಿ ಸಮಾವೇಶ ನಡೆಯಲಿದೆ.

ಕಂಪ್ಲಿಯ ಕಾಂಗ್ರೆಸ್ ಮುಖಂಡ ರಾಜು ನಾಯಕ ಅವರು ಈಗಾಗಲೇ ಜೆಡಿಎಸ್ ಸೇರ್ಪಡೆ ಆಗಿದ್ದು, ಅವರ ಹೆಸರನ್ನು ಕಂಪ್ಲಿ ಕ್ಷೇತ್ರಕ್ಕೆ ಘೋಷಣೆ ಮಾಡಲಿದ್ದಾರೆ.

15–20 ಸಾವಿರ ಜನರು ಕುರುಗೋಡಿನಲ್ಲಿ ನಡೆಯುವ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ರಾಜ್ಯಾಧ್ಯಕ್ಷ ಸಿ.ಎಂ.ಇಬ್ರಾಹಿಂ, ಮಾಜಿ ಸಚಿವ ಎಂ.ಎಸ್.ನಬಿ, ವೆಂಕಟಪ್ಪ ನಾಯಕ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ ಅವರು, ಅಖಂಡ ಬಳ್ಳಾರಿ ಜಿಲ್ಲೆಯ ಕೆಲವು ಕಡೆ ಪಕ್ಷ ಸಂಘಟನೆ ಬಗ್ಗೆ ಹೆಚ್ ಡಿಕೆ ಅವರಿಗೆ ಅಸಮಾಧಾನ ಇದ್ದದ್ದು ನಿಜ. ಆದರೆ ಬಹಳಷ್ಟು ಕಡೆಗಳಲ್ಲಿ ನಮ್ಮ ಮುಖಂಡರು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ಗ್ರಾಮೀಣ ಕ್ಷೇತ್ರದ ಅಭ್ಯರ್ಥಿಯ ಹೆಸರನ್ನು ಶೀಘ್ರ ಘೋಷಣೆ ಮಾಡಲಾಗುವುದು, ನಾವು ಹೆಸರುಗಳನ್ನು ಅಂತಿಮಗೊಳಿಸಿ ಪಟ್ಟಿ ನೀಡುವುದು ನಮ್ಮ ಕೆಲಸ, ಅಭ್ಯರ್ಥಿಯನ್ನು ಘೋಷಿಸುವುದು ರಾಜ್ಯ ನಾಯಕರ ಜವಾಬ್ದಾರಿ ಎಂದ ತಾಯಣ್ಣ, ಜೆಡಿ–ಎಸ್ ಬಳ್ಳಾರಿಯಲ್ಲಿ ಎಂದಿಗೂ ಯಾರೊಂದಿಗೂ ಹೊಂದಾಣಿಕೆ ಮಾಡಿಕೊಂಡಿಲ್ಲ. ಈ ಚುನಾವಣೆಯಲ್ಲೂ ಕೂಡ ಯಾರೊಂದಿಗೂ ನಾವು ಹೊಂದಾಣಿಕೆ ಮಾಡಿಕೊಂಡಿಲ್ಲ, ಪಂಚರತ್ನ ಯೋಜನೆ ಮುಂದಿಟ್ಟು ಜನರಿಂದ ಮತ ಕೇಳುತ್ತೇವೆ ಎಂದರು.

ಬಿಜೆಪಿ ಮುಖಂಡು ಬಳ್ಳಾರಿಯಲ್ಲಿ ಅಭಿವೃದ್ಧಿ ಮಾಡಿದ್ದೇವೆ ಎಂದು ಹೇಳುತ್ತಾರೆ, ಬಳ್ಳಾರಿಯ ಟವರ್ ಕ್ಲಾಕ್ ಅನ್ನು ಮೂರು ಸಲ ಕೆಡವಿ ಮೂರು ಸಲ ಕಟ್ಟುತ್ತಿದ್ದಾರೆ, ಇದು ಅಭಿವೃದ್ಧಿಯೇ? ಎಂದು ಪ್ರಶ್ನಿಸಿದರು.

ವಿಮ್ಸ್ ಆಸ್ಪತ್ರೆಯಲ್ಲಿ ಆಕ್ಸಿಜನ್ ಇಲ್ಲದೇ ಮೂವರು ರೋಗಿಗಳು ಸತ್ತರು, ಸಚಿವರು ಇದರ ಬಗ್ಗೆ ತಲೆ ಕೆಡಿಸಿಕೊಳ್ಳಲಿಲ್ಲ ಎಂದರು.

ಮನೆ ಮನೆಗೆ ಮುನ್ನಾ ರಾಜ್ಯಕ್ಕೆ ಕುಮಾರಣ್ಣ ಎಂಬ ಘೋಷಣೆಯಡಿ ನಾವು ಈ ಚುನಾವಣೆಯಲ್ಲಿ ಕೆಲಸ ಮಾಡುತ್ತೇವೆ. ನಾವು ಕುಕ್ಕರ್, ಸೀರೆ ಹಂಚುವುದಿಲ್ಲ. ಪಕ್ಷದ ಯೋಜನೆ ಗುರಿ ಮುಂದಿಟ್ಟು ಜನರಿಂದ ಮತ ಕೇಳುತ್ತೇವೆ ಎಂದರು.

ಈ ಸಂದರ್ಭದಲ್ಲಿ ಮುನ್ನಾಭಾಯ್, ಜಿಲ್ಲಾಧ್ಯಕ್ಷ ಸೋಮಲಿಂಗನಗೌಡ, ವಿಜಯಕುಮಾರ್, ಹಾಲೇಶ್ವರಗೌಡ ಹಾಜ–ರಿದ್ದರು.

## ಬಿಜೆಪಿ ತೊರೆದು ಕಾಂಗ್ರೆಸ್‌ಗೆ ಸೇರ್ಪಡೆ



ಬಳ್ಳಾರಿ: ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಸಿರಿವಾರ ಗ್ರಾಮದ ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರು ಶಾಸಕ ಬಿ.ನಾಗೇಂದ್ರರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು, ಸಿರಿವಾರ ಗ್ರಾ.ಪಂ. ಸದಸ್ಯರಾದ ತಿಮ್ಮಯ್ಯ, ಸಿರಿವಾರ ಗ್ರಾಮದ ಬಿಜೆಪಿಯ ಮುಖಂಡರಾದ ರಾಮಕೃಷ್ಣ, ಹೊನ್ನೂರ್ ಸ್ವಾಮಿ, ರಾಮಾಂಜನಿ, ಶ್ರೀನಿವಾಸ್, ವಿ.ಸುಧಾಕರ, ವಿ.ನೆಟಿಗೆಲ್ಲಪ್ಪ, ವಿ.ರಮೇಶ್, ಹನುಮಂತ, ರಾಮಣ್ಣ ಸೇರಿದಂತೆ ಇನ್ನೂ ಅನೇಕ ಬಿಜೆಪಿ ಮುಖಂಡರನ್ನು ಪಕ್ಷಕ್ಕೆ ಬರಮಾಡಿಕೊಂಡರು. ಬಳಿಕ ಮಾತನಾಡಿದ ಶಾಸಕ ಬಿ.ನಾಗೇಂದ್ರ ಅವರು ಗ್ರಾಮೀಣ ಕ್ಷೇತ್ರದಲ್ಲಿ ಬಿಜೆಪಿಯಿಂದ ಬಹಳಷ್ಟು ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಬರುವವ–ರಿದ್ದಾರೆ.ಜನರ ಸೇವೆ ಮಾಡಲು ಆಸಕ್ತಿ ಇರುವವರು ಯಾರು ಬೇಕಾದರೂ ಕಾಂಗ್ರೆಸ್ ಪಕ್ಷಕ್ಕೆ ಬರಬಹುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಸಿರಿವಾರ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರಾದ ಪಿ.ಶೇಖಲಿಂಗ, ಲೋಕರಾಜ್ ಸೇರಿದಂತೆ ಇನ್ನೂ ಅನೇಕ ಕಾಂಗ್ರೆಸ್ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಮಕ್ಕಳ ಕಲಾ ಅಂತರ್ಗತ ಕಲಿಕೆ ಯೋಜನೆ ಇತಿಹಾಸ ಕಲಿಕೆ ಜೊತೆಗೆ ವಸ್ತು: ವಿಷಯ ಅಂತರ್ಗತವಾಗಲಿ





ಬಳ್ಳಾರಿ: ಇತಿಹಾಸವನ್ನು ಅಥ–ರ್ೈಸಿಕೊಂಡರೆ ಮಾತ್ರ ವಿದ್ಯಾರ್ಥಿಗಳಿಗೆ ಇತಿಹಾಸ ಸೃಷ್ಟಿಸುವ ಧೈರ್ಯ ಬರುತ್ತದೆ. ಪೂರ್ವ ಮತ್ತು ನಂತರದ ಇತಿಹಾಸವನ್ನು ತಿಳಿಸಿಕೊಟ್ಟಾಗ ಭವಿಷ್ಯದಲ್ಲಿ ವಿದ್ಯಾರ್ಥಿಗಳು ಶಕ್ತಿಯುತರಾಗಿ ಬೆಳೆಯುವುದರ ಜೊತೆಗೆ ವಸ್ತು ವಿಷಯ ರೂಪಿಸುವರು ಎಂದು ಕಲಿ–ಕಲಿಸು ಕಲಾ ಅಂತರ್ಗತ ಯೋಜನೆಯ ಯೋಜನಾ ನಿರ್ದೇಶಕ ರಿಯಾಜ್ ಸಿಹಿಮೊಗೆ ಅವರು ಹೇಳಿದರು.

ಬೆಂಗಳೂರಿನ ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ ಸಂಸ್ಥೆ, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಬರ್ಟ್ ಬ್ರೂಪೂಟ್ ಸಂಗನಕಲ್ಲು ಪ್ರಾಕ್ತನ ವಸ್ತು ಸಂಗ್ರಹಾಲಯ ಇವರ ಸಂಂ–ಯುಕ್ತಾಶ್ರಯದಲ್ಲಿ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಛಯ ಆವರಣದಲ್ಲಿ ಶುಕ್ರವಾರ ಜೈನ್ ಮಾರ್ಕೆಟ್‌ನ ಸರ್ಕಾರಿ ಹಿಂದಿ ಮಾಧ್ಯಮ ಹಿರಿಯ ಪ್ರಾಥ–'ಮಿಕ ಶಾಲೆಯ ಮಕ್ಕಳಿಗೆ ಹಮ್ಮಿಕೊಂಡಿದ್ದ ಕಲಾ ಅಂತರ್ಗತ ಕಲಿಕೆಯ ಅನುಸಂಧಾನ ಯೋಜನೆಯಲ್ಲಿ ಅವರು ಮಾತನಾಡಿದರು. ವಸ್ತು ಸಂಗ್ರಹಾಲಯಗಳು ವಿಸ್ಮಯ ಮತ್ತು ಕುತೂಹಲ ಉಂಟು ಮಾಡುವಂತಹ ವಿಭಿನ್ನ ಜಗತ್ತಾಗಿದೆ.

ವಿದ್ಯಾರ್ಥಿಗಳಿಗೆವಸ್ತುಸಂಗ್ರಹಾಲಯಗಳಲ್ಲಿ ಶೇಖರಿಸಿಡಲಾಗಿರುವ ಪಳೆಯುಳಿಕೆಗಳನ್ನು ಪರಿಚಯಿಸಿ ಕೊಡುವುದರ ಮೂಲಕ ಇತಿಹಾಸವನ್ನು ಪಠ್ಯದ ಮೂಲಕ ಕಲಿಯುವುದರ ಬದಲು ವಸ್ತುಸಂಗ್ರಹಾಲಯಗಳಿಗೆ ಭೇಟಿ ನೀಡಿ ಅವುಗಳನ್ನು ಅಧ್ಯಯನ ಮಾಡುತ್ತ ಕಲಿಯುವ ಒಂದು ವಿಶೇಷವಾದ ಕಲಿಕಾ ವಿಧಾನವಾಗಿದೆ ಎಂದರು.ಐತಿಹಾಸಿಕವಾಗಿ ಮತ್ತು ಸಂಶೋಧನಾತ್ಮಕವಾಗಿ ಸಂಗನಕಲ್ಲು ಪಾರಂಪರಿಕ ಪ್ರದೇಶವಾಗುತ್ತದೆ.

ಇದನ್ನು ವಿದ್ಯಾರ್ಥಿಗಳಿಗೆ ತಿಳಿಸುವುದರ ಜೊತೆಗೆ ಇಲ್ಲಿನ ಪೂರ್ವೇತಿಹಾಸದ ಸಂಸ್ಕೃತಿ, ಆಹಾರ ಪದ್ಧತಿ, ಆಚರಣೆ, ಬದುಕಿನ ವಿಧಾನ, ಪ್ರಾಣಿ, ಪಕ್ಷಿ, ಆಟಿಕೆಗಳು ಮತ್ತು ವೈವಿಧ್ಯತೆಗಳನ್ನೆಲ್ಲ ವಸ್ತುಸಂಗ್ರಹಾಲಯಗಳ ಮೂಲಕ ಅರಿಯುವುದರ ಜೊತೆಗೆ ವಿದ್ಯಾರ್ಥಿಗಳ ಸೃಜನಶೀಲತೆ ಮತ್ತು ಕಲ್ಪನಾಶಕ್ತಿಯನ್ನು ಬೆಳೆಸಿ ಅವರ ಜ್ಞಾನವನ್ನು ವಸ್ತುಸಂಗ್ರಹಾಲಯಗಳ ವೀಕ್ಷಣೆ ಮತ್ತು ಅಧ್ಯಯನದ ಮೂಲಕ ಹೊಸ ಹುಡುಕಾಟಗಳೊಂದಿಗೆ ರೂಪಾಂತರಗೊಳಿಸಲು ಸಾಧ್ಯವಾಗುತ್ತದೆ ಎಂದರು.

ವಿದ್ಯಾರ್ಥಿಗಳ ಆಲೋಚನಾ ಶಕ್ತಿ ಮತ್ತು ಕಲ್ಪನಾಶಕ್ತಿಯನ್ನು ಇಮ್ಮಡಿಗೊಳಿಸಿ ವಸ್ತು ಸಂಗ್ರಹಾಲಯಗಳಲ್ಲಿ ಶೇಖರಿಸಿಟ್ಟಿರುವ ಪುರಾತನವಾದ ಪಳೆಯುಳಿಕೆಗಳನ್ನು ವಿದ್ಯಾರ್ಥಿಗಳು ಮುಟ್ಟಿ ಅದನ್ನು ಅನುಭವಿಸಿ ಅದರ ಮೂಲಕ ವಿದ್ಯಾರ್ಥಿಗಳ ಆಲೋಚನೆಗಳಿಗೆ ಪುಷ್ಟಿ ನೀಡುವ ಪ್ರಯತ್ನ ಮಾಡಲಾಗುವುದು ಎಂದರು.ರಾಬರ್ಟ್ ಬ್ರೂಸ್ ಫೂಟ್ ಸಂಗನಕಲ್ಲು ಪ್ರಾಕ್ತನ ವಸ್ತು ಸಂಗ್ರಹಾಲಯದ ಕಮಿಟಿ ಸದಸ್ಯ ಅಹಿರಾಜ್.ಎಂ ಅವರು ಮಾತನಾಡಿ, ಜಿಲ್ಲಾಡಳಿತ ಸಹಯೋಗದೊಂದಿಗೆ ಪ್ರಾಗೈತಿಹಾಸ ತಜ್ಞ ಪ್ರೊ.ರವಿ ಕೊರಿಶೆಟ್ಟರ್ ಅವರು ಜನರಿಗೆ, ಅದರಲ್ಲೂ ಮಕ್ಕಳಿಗೆ, ತಮ್ಮ ಇತಿಹಾಸ ಹಾಗೂ ಪರಂಪರೆಯನ್ನು ಪರಿಚಯಿಸುವ ಉದ್ದೇಶದಿಂದ ವಸ್ತುಸಂಗ್ರಹಾಲಯ ಸ್ಥಾಪಿಸಿದರು.

ಇಂತಹ ಕಾರ್ಯಗಾರಗಳನ್ನು ಆಯೋಜಿಸುವ ಮೂಲಕ ವಸ್ತು ಸಂಗ್ರಹಾಲಯವು ತನ್ನ ಉದ್ದೇಶವನ್ನು ಸಾಧಿಸುತ್ತಿದೆ ಎಂದು ಅಭಿಪ್ರಾಯ ಪಟ್ಟರು.

ಈ ವೇಳೆ ಶಾಲಾ ಮಕ್ಕಳು ರಾಬರ್ಟ್ ಬ್ರೂಸ್ ಫೂಟ್ ವಸ್ತು ಸಂಗ್ರಹಾಲಯದಲ್ಲಿರುವ ಪ್ರಾಚೀನಯುಗದ ವಿವಿಧ ಮಡಿಕೆ ಮತ್ತು ಇತರೆ ಆಯುಧಗಳ ಪ್ರತಿರೂಪವಾಗಿ ಮಣ್ಣಿನಿಂದ ಸ್ವತಃ ತಾವೇ ತಯಾರಿಸಿ ನೋಡುಗರಿಗೆ ಪ್ರದರ್ಶನಕ್ಕಿ–ರಿಸಲಾಗಿತ್ತು.

ಈ ಸಂದರ್ಭದಲ್ಲಿ ರಾಬರ್ಟ್ ಬ್ರೂಸ್ ಫೂಟ್ ಸಂಗನಕಲ್ಲು ಪ್ರಾಕ್ತನ ವಸ್ತು ಸಂಗ್ರಹಾಲಯದ ತಾಂತ್ರಿಕ ಸಹಾಯಕರಾದ ಗೌರಿ, ಜೈನ್ ಮಾರ್ಕೆಟ್‌ನ ಸರ್ಕಾರಿ ಹಿಂದಿ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಪ್ರಾಂಶುಪಾಲ ರಘುರಾಂ ಮತ್ತು ಸಂಪನ್ಮೂಲ ವ್ಯಕ್ತಿಗಳಾಗಿ ನಾಗರಾಜ, ಸಹನಾ.ಪಿ ಸೇರಿದಂತೆ ಶಾಲಾ ಮಕ್ಕಳು, ಸಿಬ್ಬಂದಿಗಳು ಇದ್ದರು.

## ಬಿಜೆಪಿ ಪ್ರಚಾರ ಪ್ರಗತಿ ರಥಕ್ಕೆ ಚಾಲನೆ



ಬಳ್ಳಾರಿ: ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣೆಯ ಕಾವು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಬೆನ್ನಲ್ಲೇ, ಭಾರತೀಯ ಜನತಾ ಪಾರ್ಟಿ ಪ್ರಚಾರದ ಪ್ರಗತಿ ರಥಕ್ಕೆ ಚಾಲನೆ ನೀಡಿದೆ.

ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಸಂಚಯಿ–ರಿಸಲಿರುವ ಬಿಜೆಪಿ ಪ್ರಚಾರದ ಪ್ರಗತಿ ರಥವು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಾಧನೆಯ ಬಗ್ಗೆ ಸಾರ್ವಜನಿಕರ ಮುಂದಿಡಲಿದೆ. ಬಿಜೆಪಿಯಿಂದ ನಿಯೋಜಿಸಿದ ಈ ಕಾರ್ಯಕ್ರಮಕ್ಕೆ ಬಳ್ಳಾರಿ ನಗರ ಶಾಸಕ ಜೀ.ಸೋಮಶೇಖರ್ ರೆಡ್ಡಿ, ಬಿಜೆಪಿ ಜಿಲ್ಲಾ ಅದ್ಯಕ್ಷ ಜಿ.ಮುರಹರ ಗೌಡ ಅವರು ವಿದ್ಯುಕ್ತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಜಿ. ವಿರಶೇಖರ ರೆಡ್ಡಿ, ಮಹಾ ನಗರ ಪಾಲಿಕೆ ಸದಸ್ಯರಾದ ಟಿ. ಶ್ರೀನಿವಾಸ್ ಮೋತ್ಕರ್, ಬಳ್ಳಾರಿ ನಗರದ ಪ್ರಧಾನ ಕಾರ್ಯದರ್ಶಿ ಕೆ. ರಾಮಾಂಜಿನಿ, ಜಿಲ್ಲಾ ಮಾಧ್ಯಮ ಸಂಚಾಲಕರಾದ ರಾಜೀವ ಸಿಂದಿಗಿ, ಯುವ ಧುರೀಣರಾದ ಜಿ.ಶ್ರವಣ ಕುಮಾರ್ ರೆಡ್ಡಿ, ಮುಖಂಡರಾದ ಕೃಷರೆಡ್ಡಿ ಹಾಗೂ ಕಾರ್ಯಕರ್ತರು ಇದ್ದರು.

## ಕೊಚ್ಚಿನ್ ಕನ್ನಡ ಸಂಸ್ಕೃತಿ ಉತ್ಸವದಲ್ಲಿ ಗೌರವಕ್ಕೆ ಪಾತ್ರರಾದ ಟಿ.ಹೆಚ್.ಎಂ.ಬಸವರಾಜ



ಬಳ್ಳಾರಿ: ಕರ್ನಾಟಕ ಇತಿಹಾಸ ಅಕಾಡೆಮಿ ಜಿಲ್ಲಾಧ್ಯಕ್ಷ ಹಾಗೂ ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯ, ಇತಿಹಾಸಕಾರ, ಲೇಖಕ, ಜಾನಪದ ಕಲಾವಿದ ಹಾಗೂ ಸಾಹಿತಿಗಳಾದ ಟಿ.ಹೆಚ್.ಎಂ.ಬಸವರಾಜರವರಿಗೆ ಕೊಚ್ಚಿನ್ ಕನ್ನಡ ಸಂಸ್ಕೃತಿ ಉತ್ಸವದಲ್ಲಿ ಸನ್ಮಾನಿಸಿ ಗೌರವಿಸಲಾಗುತ್ತಿದೆ.

ಕೇರಳದ ಎರ್ನಾಕುಲಂನ ಟೌನ್‌ಹಾಲ್‌ನಲ್ಲಿ ಏ.30ರಂದು ಬೆಳಿಗ್ಗೆ 9.00 ರಿಂದ ನಡೆಯಲಿರುವ ಕೊಚ್ಚಿನ್ ಕನ್ನಡ ಸಂಸ್ಕೃತಿ ಉತ್ಸವ 2023 ರ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಲ್ಲಿ ಬಳ್ಳಾರಿಯ ಇತಿಹಾಸಕಾರ ಟಿ.ಹೆಚ್.ಎಂ.ಬಸವರಾಜ ಇವರು ಗೌರವಾರ್ಪಣೆಗೆ ಭಾಜನರಾಗಿದ್ದಾರೆ.

75ನೇ ಭಾರತ ಸ್ವಾತಂತ್ರ ಅಮೃತ ಮಹೋತ್ಸವದ ಸವಿನೆನಪಿಗಾಗಿ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ, ಕೊಚ್ಚಿನ್ ಕನ್ನಡ ಸಂಘ, ಕರ್ನಾಟಕ ಸರ್ಕಾರದ ಗಡಿ ಅಭಿವೃದ್ಧಿ ಪ್ರಾಧಿಕಾರ ಮತ್ತು ಬೆಂಗಳೂರಿನ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಈ ಉತ್ಸವವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿ ಕುಸುಮಾ ಹಾಗೂ ಡಿ.ಕೆ.ಸುರೇಶ್ ವಿರುದ್ಧ ಎಫ್‌ಐಆರ್ ದಾಖಲು

ಬೆಂಗಳೂರು: ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಮತದಾರರನ್ನು ಸೆಳೆಯಲು ಇನ್ನಿಲ್ಲದ ಕಸರತ್ತು ನಡೆಸಿದ್ದಾರೆ. ಆರ್.ಆರ್.ನಗರದ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ ವಿರುದ್ಧ ಎಫ್ ಐ ಆರ್ ದಾಖಲಾಗಿದೆ.

ಮತದಾರರಿಗೆ ಆಮಿಷವೊಡ್ಡಿದ ಆರೋಪದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ, ಸಂಸದ ಡಿ.ಕೆ.ಸುರೇಶ್ ಹಾಗೂ ಜಗದೀಶ್ ವಿರುದ್ಧ ಎಫ್ ಐ ಆರ್ ದಾಖಲಾಗಿದೆ.

ಆರ್.ಆರ್.ನಗರ ಕ್ಷೇತ್ರದಲ್ಲಿ ಕುಸುಮಾ ಬೆಂಬಲಿಗರು ಮತದಾರರಿಗೆ ತವಾ ಹಂಚುತ್ತಿದ್ದ ಬಗ್ಗೆ ಮಾಹಿತಿ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಈ ವೇಳೆ ಚುನಾವಣಾಧಿಕರಿಗಳು ಕಾಣುತ್ತಿದ್ದಂತೆ ತವಾ ಹಂಚುತ್ತಿದ್ದವರು ಪರಾರಿಯಾಗಿದ್ದಾರೆ. ಸ್ಥಳದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ, ಸಂಸದ ಡಿ.ಕೆ.ಸುರೇಶ್ ಭಾವಚಿತ್ರವಿರುವ ಬಾಕ್ಸ್ ಗಳು ಪತ್ತೆಯಾಗಿವೆ. ಚುನಾವಣಾಧಿಕಾರಿಗಳ ದೂರು ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ, ಸಂಸದ ಡಿ.ಕೆ.ಸುರೇಶ್ ವಿರುದ್ಧ ಎಫ್ ಐಆರ್ ದಾಖಲಾಗಿದೆ.

## 21ನೇ ಶತಮಾನ ಮೋದಿ ಯುಗ: ಮುರುಗೇಶ ನಿರಾಣಿ



ಬೀಳಗಿ: ಕಳೆದ 5 ವರ್ಷಗಳ ಅವಧಿಯಲ್ಲಿ ನಾನು ಮಾಡಿದ ಅಭಿವೃದ್ಧಿ ಕಾರ್ಯಗಳು ಮತಕ್ಷೇತ್ರದ ಮನೆ–ಮನೆಗೂ ತಲುಪಿವೆ.

ಜನ ಸಮುದಾಯದ ನಾಡಿಮಿಡಿತ ಅರಿತು ಕೆಲಸ ಮಾಡಿದ ಸಾರ್ಥಕತೆ ನನ್ನಲ್ಲಿದೆ ಎಂದು ಸಚಿವ ಮುರುಗೇಶ ನಿರಾಣಿ ಹೇಳಿದರು.

ಬೀಳಗಿ ಮತಕ್ಷೇತ್ರ ವ್ಯಾಪ್ತಿಯ ಫಕೀರ ಬೂದಿಹಾಳ, ನರೆನೂರ, ಅಂಕಲಗಿ, ಕಾತರಕಿ, ಶಿರಗುಪ್ಪಿ, ನೀರ ಬೂದಿಹಾಳ ಗ್ರಾಮಗಳಿಗೆ ತೆರಳಿ ಪ್ರಚಾರ ನಡೆಸಿ ಕೊಪ್ಪ ಎಸ್. ಕೆ. ಗ್ರಾಮದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು ಗ್ರಾಮೀಣ ಜನರ ಮೂಲಭೂತ ಸೌಕರ್ಯವನ್ನು ಉನ್ನತೀಕರಿಸುವಲ್ಲಿ ಶಕ್ತಿ ಮೀರಿ ಕೆಲಸ ಮಾಡಿದ್ದೇನೆ. ಪ್ರತಿ ಗ್ರಾಮಗಳಲ್ಲಿಯೂ ರಸ್ತೆ, ವಿದ್ಯುತ್, ಶಾಲೆ, ಸಮುದಾಯ ಭವನ, ಶುದ್ಧ ಕುಡಿಯುವ ನೀರು ದೊರೆಯುತ್ತಿದೆ. ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿ ಅನೇಕರು ಕಾಂಗ್ರೆಸ್ ತೊರೆದು ಬಿಜೆಪಿ ಸೇರುತ್ತಿದ್ದಾರೆ.

ಅಭಿವೃದ್ಧಿಯ ಈ ಪರ್ವಕಾಲ ಮುಂದುವರೆಯಲು ಮತ್ತೊಮ್ಮೆ ಜನಾಶೀರ್ವಾದ ಮಾಡಿ ಎಂದು ವಿನಂತಿಸಿಕೊಂಡರು.

ಕಾಂಗ್ರೆಸ್ ಸುಳ್ಳಿನ ಕಂತೆಗಳನ್ನು ಜನರ ಮೇಲೆ ಹೇರುತ್ತಿದೆ. ಕಳೆದ 75 ವರ್ಷಗಳಲ್ಲಿ ದಲಿತರು ಹಿಂದುಳಿದವರನ್ನು ವೋಟಿಗಾಗಿ ಬಳಕೆ ಮಾಡಿಕೊಂಡವರು ಇಂದು ಬಿಜೆಪಿಗೆ ಪಾಠ ಮಾಡಲು ಬರುತ್ತಿದ್ದಾರೆ.

ಇದು 21ನೇ ಶತಮಾನದ ಮೋದಿ ಯುಗ ಜನ ಪ್ರಜ್ಞಾವಂತರಾಗಿದ್ದಾರೆ.

ಪುಕ್ಕಟ್ಟೆ ಭರವಸೆಗಳ ಪೊಳ್ಳು ಮಾತಿಗೆ ಮರಳಾಗುವುದಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಅಂಗಡಿ, ಮಲ್ಲಪ್ಪ ಪೂಜೇರಿ, ಲಕ್ಷ್ಮಣ ದೊಡ್ಡಮನಿ, ಗಿರೇಪ್ಪ ಕಟಗಿ, ಈರಣ್ಣ ಕುಂದರಗಿಮಠ, ಶ್ರೀಶೈಲ ಸಂಶಿ ಪ್ರಮುಖರು ಭಾಗವಹಿಸಿದ್ದರು.

ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆ.

ಕಳೆದ 5 ವರ್ಷಗಳ ಅವಧಿಯಲ್ಲಿ ಕೊಪ್ಪ ಎಸ್.ಕೆ. ಗ್ರಾಮದಲ್ಲಿ ನಡೆದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ರೆಡ್ಡಿ, ವಾಲ್ಮೀಕಿ, ಹಾಲುಮತ ಹಾಗೂ ವಿವಿಧ ಸಮಾಜಗಳ ಮುಖಂಡರು ಗಳಾದ ಬಸವರಾಜ ಮಲಘಾಣ, ಈರಪ್ಪ ಮಲಘಾಣ, ವೆಂಕಪ್ಪ ಹಲಗತ್ತಿ, ರಮೇಶ ಪಾಟೀಲ, ವೆಂಕಟೇಶ ವಜ್ಜರಮಟ್ಟಿ, ಗಂಗಾಧರ ಮೇಟಿ, ಕಾಶಿಲಿಂಗ ಜೋಗಿ, ಸಚಿನ ಮೇಟಿ, ಗಂಗಾಧರ ಮಾಸ್ತಿ, ರವಿ ಮದಭಾಂವಿ, ಮಂಜುನಾಥ ತಳವಾರ ಸೇರಿ ಅನೇಕರು ಮುರುಗೇಶ ನಿರಾಣಿಯವರ ನೇತೃತ್ವದಲ್ಲಿ ಕಾಂಗ್ರೆಸ್ ಬಿಜೆಪಿ ಸೇರ್ಪಡೆಯಾದರು.

## ವದ್ದಟ್ಟಿ ಗ್ರಾಮದ ಬೂತ್ ಮಟ್ಟದ ಕಾರ್ಯಕರ್ತರ ಸಂಘಟನಾ ಸಭೆ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ನಾಯಕರಾದ ಟಿ ಹೆಚ್ ಸುರೇಶ್ ಬಾಬು ರವರು ಬೂತ್ ಮಟ್ಟದಲ್ಲಿ ಕಾರ್ಯಕರ್ತರನ್ನು ಚುನಾವಣೆಗೆ ಸಿದ್ಧಗೊಳಿಸಲು ವದಟ್ಟಿ ಗ್ರಾಮಕ್ಕೆ ಭೇಟಿ ನೀಡಿ ಆಯೋಜಿಸಿದ್ದ ಗ್ರಾಮದ ಬೂತ್ ಮಟ್ಟದ ಕಾರ್ಯಕರ್ತರ ಸಂಘಟನಾ ಸಭೆಯಲ್ಲಿ ಭಾಗವಹಿಸಿ ಗ್ರಾಮದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಮಾಹಿತಿ ಪಡೆದು ಅವುಗಳೆಲ್ಲವನ್ನು ಈಡೇರಿಸುವ ಭರವಸೆ ನೀಡಿದರು.

ಇದೇ ವೇಳೆ ಗ್ರಾಮದ ಹಲವು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಟಿ ಹೆಚ್ ಸುರೇಶ್ ಬಾಬು ಅವರ ನೇತೃತ್ವದಲ್ಲಿ ನಮ್ಮ ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಯಾದರು. ನೆರೆದಿದ್ದ ಕಾರ್ಯಕರ್ತರನ್ನು ಉದ್ದೇಶಿಸಿ ಕೇಂದ್ರ ಮತ್ತು ರಾಜ್ಯದ ಬಿಜೆಪಿ ಸರ್ಕಾರ ರೂಪಿಸಿರುವ ಜನಪರ ಯೋಜನೆಗಳ ಮಾಹಿತಿ ನೀಡಿ ಕಂಪ್ಲಿ ಕ್ಷೇತ್ರದ ಸಮೃದ್ಧಿಗಾಗಿ ಬಿಜೆಪಿ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯರಾದ ಯರಂಗಳಿ ತಿಮ್ಮರೆಡ್ಡಿ, ರಾಮಲಿಂಗಪ್ಪನವರ ಗುತ್ತಿಗನೂರು ವಿರುಪಾಕ್ಷಗೌಡ ,ಮಂಡಲ ಅಧ್ಯಕ್ಷರಾದ ಅಳ್ಳಳ್ಳಿ ವೀರೇಶ್‌ರವರು ಗ್ರಾಮದ ಹಿರಿಯ ಕಾರ್ಯಕರ್ತರು ಗ್ರಾಮಸ್ಥರು ಅಭಿಮಾನಿಗಳು ಜೊತೆಯಲ್ಲಿದ್ದರು.

# ಬಿಜೆಪಿ ಕಾರ್ಯಕರ್ತರು ಒಗ್ಗಟ್ಟಾಗಿ ಚುನಾವಣೆ ಎದುರಿಸುತ್ತೇವೆ: ನಡಹಳ್ಳಿ



ತಾಳಿಕೋಟೆ: ಬಿಜೆಪಿ ಎಲ್ಲ ಕಾರ್ಯಕರ್ತರು ಒಗ್ಗಟ್ಟಾಗಿ ಚುನಾವಣೆಯ್ನು ಎದುರಿಸಬೇಕೆಂಬ ಸಂಕಲ್ಪ ಪ್ರತಿಯೊಬ್ಬ ಕಾರ್ಯಕರ್ತರಲ್ಲಿದೆ ಪಕ್ಷಕ್ಕೆ ಜೀವಾಳವಾಗಿರುವದು ಕಾರ್ಯ ಕರ್ತರಾಗಿದ್ದಾರೆಂದು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಶಾಸಕ ಎ. ಎಸ್.ಪಾಟೀಲ(ನಡಹಳ್ಳಿ) ಅವರು ಹೇಳಿದರು.

ಶುಕ್ರವಾರರಂದು ಪಟ್ಟಣದ ಶ್ರೀ ವಿಠ್ಠಲ ಮಂದಿರದ ಮುಂಭಾಗದ ಆವರಣದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು ಇಡೀ ವಿಧಾನ ಸಭಾ ಕ್ಷೇತ್ರದಲ್ಲಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರಲ್ಲಿ ಯಾವುದೇ ರೀತಿಯ ಬಿನ್ನಾಭಿಪ್ರಾಯವಿಲ್ಲಾ ಅಸಮಾದಾನವಿಲ್ಲಾ ಸಣ್ಣ ಪುಟ್ಟ ಇದ್ದರೆ ಅದು ನಮ್ಮ ಪಕ್ಷದ ಮನೆಯೊಳಗೆ ಇದುದ್ದಾಗಿದೆ ಅದು ಹೊರಗಡೆ ತೋರಪಡಿಸುವಂತಹದ್ದು ವ್ಯವಸ್ಥೆ ನಮ್ಮಲ್ಲಿ ಇಲ್ಲಾ ಹೀಗಾಗಿ ತಾಳಿಕೋಟೆ ನಗರದ ಪ್ರತಿ ಕಾರ್ಯಕರ್ತರು ಒಗ್ಗೂಡಿಸಿಕೊಂಡು ನಮ್ಮ ಕಾರ್ಯಕರ್ತರ ಮುಖಂಡತ್ವದಲ್ಲಿ ಅವರ ನೇತೃತ್ವದಲ್ಲಿಯೇ ಈ ಚುನಾವಣೆಯನ್ನು ಯಶಸ್ವಿಯಾಗಿ ನಡೆಯಲಿದೆ.

ನಾನು ನೆಪ ಮಾತ್ರಕ್ಕೆ ಅಷ್ಟೇ ಆದರೆ ಈ ಚುನಾವಣೆಯನ್ನು ಮುನ್ನಡೆಸುವಂತವರು ಪ್ರತಿ ಮತದಾರರ ಮನೆ ಮನೆಗೆ ಹೋಗಿ ಮತ ಕೇಳುವಂತಹ ಕೆಲಸ ಮಾಡುವವರು ನಮ್ಮ ಕಾರ್ಯಕರ್ತರು ಆಗಿದ್ದಾರೆ ಅವರೆಲ್ಲರೂ ಇವತ್ತು ಒಮ್ಮನಿಸಿನಿಂದ ಒಗ್ಗಟ್ಟಿನಿಂದ ಆ ಕೆಲಸ ಮಾಡಲಿಕ್ಕೆ ತಯಾರಾಗಿದ್ದಾರೆ ದಿ. 9 ರವಿವಾರ 10–30 ಗಂಟೆಗೆ ವಿಠ್ಠಲ ಮಂದಿರದ ಮೇಲ್ಭಾಗದ ಕಲ್ಯಾಣ ಮಂಟಪದಲ್ಲಿ ತಾಳಿಕೋಟೆ ಪಟ್ಟಣದ 23 ವಾರ್ಡುಗಳಲ್ಲಿ ಪ್ರತಿಭೂತಿನಿಂದ ಕನಿಷ್ಠ 30 ಜನ ಕಾರ್ಯಕರ್ತರ ಭೂತಮಟ್ಟದ ಸಭೆಯನ್ನು ನಡೆಸಲಿದ್ದೇವೆ.

ಸಭೆಯಲ್ಲಿ ಪ್ರತಿಭೂತಮಟ್ಟದಿಂದ ಕಾರ್ಯಕರ್ತರು ಯಾವ ರೀತಿ ಕೆಲಸ ಮಾಡಬೇಕು ಮನೆ ಮನೆಗೆ ಹೋಗಬೇಕು ಎಂಬುದರ ಬಗ್ಗೆ ಚರ್ಚಿಸಿ ರೂಪರೇಶ ತಯಾರ ಮಾಡಲಿದ್ದೇವೆ ಅವತ್ತೇ ನಮ್ಮ ತಾಳಿಕೋಟೆ ನಗರಕ್ಕೆ ಸೀಮಿತವಾಗಿ ಚುನಾವಣಾ ನಿರ್ವಹಣಾ ಸಮಿತಿ ಮಾಡಲಿದ್ದೇವೆ ಭೂತಿಗೆ ಇಬ್ಬರು ಜವಾಬ್ದಾರಿ ವಹಿಸಲಿದ್ದಾರೆ ಅವರ ಮೇಲೆ ಭೂತಿಗೆ ಒಬ್ಬರು ಉಸ್ತುವಾ–ರಿಗಳು ಇರುತ್ತಾರೆ.

ಆ ಉಸ್ತುವಾರಿಗಳು 1 ತಿಂಗಳು ಪೂರ್ಣಪ್ರಮಾಣದ ಉಸ್ತುವಾರಿ ತೆಗೆದುಕೊಳ್ಳಬೇಕು ಭೂತಿಗೆ ಇಬ್ಬರು ಇದ್ದವರು ದಿನಕ್ಕೆ 3 ಗಂಟೆ ಸಮಯ ಕೊಟ್ಟು ಕೆಲಸ ಮಾಡಬೇಕು ಪ್ರತಿಭೂತಿನಲ್ಲಿರುವ 30 ಕಾರ್ಯಕರ್ತರು ಪ್ರತಿನಿತ್ಯ 3 ಗಂಟೆ ಸಮಯಕೊಟ್ಟು ಕೆಲಸ ಮಾಡಬೇಕು ಪ್ರತಿನಿತ್ಯ ಕನಿಷ್ಠ 50 ಮನೆಗಳಿಗೆ ಬೆಟ್ಟಿ ನೀಡಿ ಕೇಂದ್ರ ಸರ್ಕಾರದ, ರಾಜ್ಯ ಸರ್ಕಾರದ ಸಾಧನೆಗಳು ಹಾಗೂ ಮುದ್ದೇಬಿಹಾಳ ಮತಕ್ಷೇತ್ರದಲ್ಲಿ 5 ವರ್ಷದ ಬಿಜೆಪಿ ಆಡಳಿತದಲ್ಲಿ ನಗರದಲ್ಲಿ ನಾನು ಮಾಡಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ವಿವರಿಸಿ ಮನವರಕೆ ಮಾಡುವಂತಹ ಕೆಲಸ ಈ ಚುನಾವಣಾ ನಿರ್ವಹಣಾ ಸಮಿತಿ ಮಾಡಲಿದೆ ಎಂದರು.

ನಾನು ಠಿಕೆ ರಾಜಕಾರಣ ಮಾಡುವದಿಲ್ಲಾ–ನಡಹಳ್ಳಿ

ತಾಳಿಕೋಟೆ, ನಾನು ಯಾರನ್ನು ಠಿಕೆ ಮಾಡಲಿಕ್ಕೆ ಹೋಗುವದಿಲ್ಲಾ ನನಗೆ ಠಿಕೆ ಮಾಡಿ ರಾಜ–ಕಾರಣ ಮಾಡುವಂತಹ ಅವಶ್ಯಕತೆ ನಮಗಿಲ್ಲಾ ನಾವು ಮಾಡಿರುವ ಕೆಲಸಗಳನ್ನು ಮುಂದಿಟ್ಟುಕೊಂಡು ಮತ್ತು ಮುಂದೆ 5 ವರ್ಷ ಏನು ಕೆಲಸ ಮಾಡಲಿದ್ದೇವೆ ಎಂಬುದನ್ನು ಜನರಿಗೆ ತಿಳಿಸಿ ಮತಕೇಳುವಂತಹ ಕೆಲಸ ಮಾಡಲಿದ್ದೇವೆ ನಾವು ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇವೆ ಆ ಕೆಲಸದ ದಾಖಲಾತಿ ಸಮೇತ ನನ್ನ ಅಭಿಮಾನಿ ಬಳಗ ಕಿರು ಪುಸ್ತಕವನ್ನು ಹೊರಗೆ ತಂದಿದ್ದಾರೆ ಪ್ರತಿ ಮತದಾರ–ರಿಗೆ ಮುಟ್ಟಿಸುವಂತಹ ಕೆಲಸ ಮಾಡಲಿದ್ದೇವೆ ಅದನ್ನು ಮತದಾರರು ಓದಿ ಎಂದು ಹೇಳುತ್ತೇವೆ ಆ ಪುಸ್ತಕದಲ್ಲಿ ನಾವು ಮಾಡಿರುವ ಕೆಲಸದ ದಾಖಲಾತಿಗಳು ಕೊಟ್ಟಿದ್ದೇವೆ ಏನೇನು ಮಾಡಿದ್ದೇವೆಂದು ಹೇಳಿದ್ದೇವೆ ಅದನ್ನು ಮತದಾರರು ಗ್ರೌಂಡಿಗೆ ಹೋಗಿ ಪರಿಶೀಲಿಸಿ ಗ್ರೌಂಡಲ್ಲಿ ಏನಿದೆ ಅದು ಪುಸ್ತಕದಲ್ಲಿ ದಾಖಲಾತಿ ನೀಡಿದ್ದೇನೆ. ಆದರೆ ನಾನು ಮಾತ್ರ ಒಂದು ಶಬ್ದ ಯಾರಿಗೆ ಬೈಯಲ್ಲಾ ನಾನು ಒಂದೇ ಹೇಳುವದು ನಾನು 5 ವರ್ಷ ಏನು ಕೆಲಸ ಮಾಡಿದ್ದೇನೆ.

## ಏಪ್ರೀಲ್ 24 ರಂದು ರಾಷ್ಟ್ರೀಯ ಲೋಕ ಅದಾಲತ್

ಧಾರವಾಡ: ಧಾರವಾಡ ಜಿಲ್ಲೆಯಾದ್ಯಂತ ಇರುವ ಎಲ್ಲಾ ಅಧೀನ ನ್ಯಾಯಾಲಯಗಳಲ್ಲಿ ಏಪ್ರೀಲ್ 24 ರಂದು ರಾಷ್ಟ್ರೀಯ ಲೋಕ ಅದಾಲತ್ನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನಿರ್ದೇಶನದ ಮೇರೆಗೆ ಆಯೋಜಿಸಲಾಗಿದೆ.

ಈ ಲೋಕ್ ಅದಾಲತ್ದಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಎಲ್ಲ ಪ್ರಕರಣಗಳನ್ನು ಹಾಗೂ ಮೋಟಾರ್ ವಾಹನ ಅಪಘಾತ ಪರಿಹಾರದ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಮುಂತಾದ ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು, ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು, ವೈವಾಹಿಕ ಅಥ–ವಾ ಜೀವನಾಂಶ ಪ್ರಕರಣಗಳು, ಕಾನೂನಿನನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಬ್ಯಾಂಕ್, ಕಾರ್ಮಿಕರು, ನೀರು ಮತ್ತು ವಿದ್ಯುತ್ಗೆ ಸಂಬಂಧಿಸಿದ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.

ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ ಲೋಕ್ ಅದಾಲತ್ನ ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶೆ ಸಿ.ಎಮ್. ಪುಷ್ಪಲತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮ ಚಟುವಟಕೆ ತಡೆಗಟ್ಟಲು ಅಬಕಾರಿ ತಂಡ ರಚನೆ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಘೋಷಣೆ ಹಿನ್ನೆಲೆಯಲ್ಲಿ ಬೆಳಗಾವಿ ದಕ್ಷಿಣ ಜಿಲ್ಲೆಯಾದ್ಯಂತ ಕಳ್ಳಭಟ್ಟಿ ಸಾರಾಯಿ ತಯಾರಿಕೆ ಹಾಗೂ ಮಾರಾಟ, ಗೋವಾ ಮದ್ಯ ಸಾಗಾಣಿಕೆ ಹಾಗೂ ಮಾರಾಟ ಹೆಚ್ಚಾಗುವ ಸಂಭವ ಇರುವುದರಿಂದ ಅಕ್ರಮ ಚಟುವಟಕೆಗಳು ನಡೆಯದಂತೆ ಅಬಕಾರಿ ತಂಡಗಳನ್ನು ರಚಿಸಲಾಗಿದೆ.


ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿರಂತರವಾಗಿ ಅಬಕಾರಿ ದಾಳಿ, ಹಗಲು ರಾತ್ರಿ ಗಸ್ತು, ರಸ್ತೆಗಾವಲು ನಡೆಸಿ, ವಾಹನಗಳನ್ನು ತಪಾಸಣೆ ನಡೆಸಲಾಗುತ್ತಿದೆ. ಅಂತರಾಜ್ಯ ಗಡಿ ಭಾಗದಲ್ಲಿ ನಿರ್ಮಿಸಿರುವ 05 ತನಿಖಾ ಠಾಣೆಗಳಿಗೆ ಅಬಕಾರಿ ಸಿಬ್ಬಂದಿಯನ್ನು ಒದಗಿಸಲಾಗಿದೆ.

ಅಬಕಾರಿ ಅಕ್ರಮಗಳು ಕಂಡು ಬಂದಲ್ಲಿ ಪ್ರಕರಣ ದಾಖಲಿಸಲಾಗುತ್ತಿದೆ ಹೀಗಾಗಿ ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023ರ ಹಿನ್ನೆಲೆಯಲ್ಲಿ ಜಿಲ್ಲೆಯ ವ್ಯಾಪ್ತಿಯಾದ್ಯಂತ ಮಾ.29, 2023 ರಿಂದ ಏ.5 2023 ರವರೆಗೆ ಒಟ್ಟು 94 ದಾಳಿ ನಡೆಸಿ, 54 ಅಬಕಾರಿ ಪ್ರಕರಣಗಳನ್ನು ದಾಖಲಿಸಿಕೊಂಡು 37 ಆರೋಪಿಗಳನ್ನು ಬಂಧಿಸಿ 2,42,690 ಲೀಟರ್ ಮದ್ಯ, 195 ಲೀ ಹೊರ ರಾಜ್ಯದ ಮದ್ಯ, 9804,600 ಲೀ ಬೀಯರ್ ಮತ್ತು 140 ಲೀ ಕಳ್ಳಭಟ್ಟಿ ಸಾರಾಯಿಯನ್ನು ವಶಪಡಿಸಿಕೊಳ್ಳಲಾಗಿದೆ.

ಅದೇ ರೀತಿಯಲ್ಲಿ 11 ದ್ವಿಚಕ್ರ ವಾಹನ, 02 ಕಾರ್, 01 ಆಟೋ, 01 ಹನ್ನೆರಡು ಚಕ್ರದ ವಾಹನ (ಒಟ್ಟು ವಾಹನಗಳ ಅಂದಾಜು ಮೌಲ್ಯ ರೂ. 28,07,000/–) ಜಪ್ತು ಪಡಿಸಿಕೊಳ್ಳಲಾಗಿದೆ. ಮದ್ಯ ಹಾಗೂ ಇತರೆ ವಸ್ತುಗಳ ಅಂ–ದಾಜು ಮೌಲ್ಯ ರೂ. 20,33,591/– ರೂ.ಗಳು ಆಗುತ್ತದೆ. ಹೀಗೆ ಒಟ್ಟು ರೂ. 48,40,591/– ರೂಗಳು

ವಶಪಡಿಸಿಕೊಳ್ಳಲಾಗಿದೆ. ಮುಂದೆಯೂ ಸಹ ಕಟ್ಟುನಿಟ್ಟಾಗಿ ಕಾರ್ಯ ನಿರ್ವಹಿಸಲಾಗುವುದು ಎಂದು ಬೆಳಗಾವಿ ಜಿಲ್ಲೆಯ(ದಕ್ಷಿಣ) ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತಿ ಚಾಕೊಲೇಟ್ ತಂದು ಕೊಡಲಿಲ್ಲವೆಂದು ಪತ್ನಿ ಆತ್ಮಹತ್ಯೆ




ಬೆಂಗಳೂರು: ಎರಡು ಮಕ್ಕಳ ತಾಯಿಯೊಬ್ಬರು, ಪತಿ ಚಾಕೊಲೇಟ್ ತಂದು ಕೊಡಲಿಲ್ಲ ಎಂದು ಬೇಸತ್ತು ಪತ್ನಿ ನೇಣಿ ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ನಂದಿನಿ (30) ನೇಣಿ ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಮಹಿಳೆ. 6 ವರ್ಷದ ಹಿಂದೆ ಮದುವೆಯಾಗಿದ್ದ ಮೃತ ನಂದಿನಿಗೆ ಇಬ್ಬರು ಮಕ್ಕಳಿದ್ದಾರೆ. ಇನ್ನು ನಂದಿನಿ ಪತಿ ಸಲೂನ್ನಲ್ಲಿ ಕೆಲಸ ಮಾಡಿಕೊಂಡಿದ್ದ. ಅದರಂತೆ ನಿನ್ನೆ ಬೆಳಗ್ಗೆ ಪತಿ ಕೆಲಸಕ್ಕೆ ಹೋಗುವಾಗ ಚಾಕೋಲೆಟ್ ತೆಗೆದುಕೊಂಡು ಬರುವಂತೆ ಹೇಳಿದ್ದಳಂತೆ. ಆದ್ರೆ, ಮಧ್ಯಾಹ್ನವಾದರೂ ಪತಿ ಚಾಕೋಲೆಟ್ ತಂದು ಕೊಟ್ಟಿಲ್ಲ. ಅಲ್ಲದೇ ಫೋನ್ ಮಾಡಿದ್ದರೂ ಪತಿ ಸ್ವೀಕರಿಸಿಲ್ವಂತೆ.

ಇದರಿಂದ ಮನನೊಂದು ಮನೆಯಲ್ಲಿ ನೇಣಿಗೆ ಶರಣಾಗಿದ್ದಾಳೆ ಎಂದು ತಿಳಿದುಬಂದಿದೆ. ಬಳಿಕ ಪತಿ ಮನೆಗೆ ಬಂದು ನೋಡಿದಾಗ ನಂದಿನಿ ನೇಣು ಹಾಕಿಕೊಂಡಿದ್ದಳು. ತಕ್ಷಣ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದ್ರೆ, ಅಷ್ಟರಲ್ಲಾಗಲೇ ನಂದಿನಿ ಪ್ರಾಣ ಪಕ್ಷಿ ಹಾರಿ ಹೋಗಿತ್ತು. ಬೆಂಗಳೂರಿನ ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಮೃತ ನಂದಿನಿಗೆ ಇಬ್ಬರು ಮಕ್ಕಳಿದ್ದಾರೆ.

## ಸಾಮಾಜಿಕ ಭದ್ರತಾ ಯೋಜನೆಗಳಿಗೆ ನೋಂದಣಿ




ಹುಳಿಯಾರು: ಹುಳಿಯಾರು ಹೋಬಳಿ ದಸೂಡಿ ಗ್ರಾಮ ಪಂಚಾಯಿತಿಗೆ ಸೇರಿದ ದಬ್ಬಗುಂಟೆ ಗ್ರಾಮದಲ್ಲಿ ದಸೂಡಿ ಗ್ರಾಮ ಪಂಚಾಯಿತಿ ಮತ್ತು ದ್ಯಾನ್ ಪೌಂಡೇಶನ್ ವತಿಯಿಂದ ಆರ್ಥಿಕ ಸಾಕ್ಷರತಾ ಕೇಂದ್ರ ಶಿರಾ RBI and SBI ರವರ ಪ್ರಾಯೋಜಕತ್ವದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳಾದ PMSBYPMJJBY and APY ಗಳಿಗೆ ನೋಂದಣಿ ಕಾರ್ಯ ಹಮ್ಮಿಕೊಳ್ಳಲಾಗಿತ್ತು.

ಗ್ರಾಮ ಪಂಚಾಯಿತಿ ಅದ್ಯಕ್ಷ ಚೇತನ್, ಗ್ರಾಪಂ ಸದಸ್ಯ ಕೆ.ಮ–ರಿಯಪ್ಪ, ದ್ಯಾನ್ ಪೌಂಡೇಶನ್ ಕೊಆರ್ಡಿನೆಟರ್ ತಿಮ್ಮಯ್ಯ, ಕಮಲಮ್ಮ, ಸಹಾಯಕಿ ಸಲ್ಮ, ಮತ್ತಿತರರು ಉಪಸ್ಥಿತರಿದ್ದರು.

# ಒಳಮೀಸಲಿ ಬಿಜೆಪಿಯ ಚುನಾವಣಾ ಗಿಮಿಕ್: ದಲಿತ ಮುಖಂಡ ಸಿ.ಎಸ್.ಲಿಂಗದೇವರು




ಹುಳಿಯಾರು: ಒಂದು ಕಡೆ ಒಳ ಮೀಸಲಾತಿ ನೀಡಿರುವುದಾಗಿ ಭಾರಿ ಪ್ರಚಾರ ಪಡೆಯುತ್ತಾರೆ. ಮತ್ತೊಂದೆಡೆ ಒಳ ಮೀಸಲಾತಿ ನಾವು ಒಪ್ಪುವುದಿಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳುತ್ತಾರೆ. ಇವೆರಡನ್ನೂ ಗಮನಿಸಿದರೆ ಒಳ ಮೀಸಲಾತಿ ನೀಡಿರುವುದು ಬಿಜೆಪಿಯ ಚುನಾವಣಾ ಗಿಮಿಕ್ ಆಗಿದೆ ಎಂದು ಚಿಕ್ಕನಾಯಕನಹಳ್ಳಿ ದಲಿತ ಮುಖಂಡ ಸಿ.ಎಸ್.ಲಿಂಗದೇವರು ಕುಟುಕಿದರು.

ಹುಳಿಯಾರಿನಲ್ಲಿ ಪತ್ರಿಕಾ ಗೋಷ್ಠಿ ನಡೆಸಿದ ಅವರು ಕಾಂಗ್ರೆಸ್ ಪಕ್ಷದಿಂದ ಮಾತ್ರ ದಲಿತರ ಉದ್ದಾರ ಮತ್ತು ಸಂವಿದಾನದ ರಕ್ಷಣೆ ಸಾಧ್ಯ. ಹಾಗಾಗಿ ಪ್ರಸಕ್ತ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ದಲಿತರು ಬೆಂಬಲಿಸಬೇಕು ಎಂದು ಮಾನವಿ ಮಾಡಿಕೊಳ್ಳುವುದಾಗಿ ತಿಳಿಸಿದರು.

ಮೊದಲಿನಿಂದಲೂ ಕಾಂಗ್ರೆಸ್ ಪಕ್ಷ ದಲಿತರ ಹಿತಾಸಕ್ತಿ ಕಾಪಾಡಿಕೊಂಡು ಬಂದಿದೆ. ಹಾಗಾಗಿ ರಾಜ್ಯದ ದಲಿತರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿಕೊಂಡು ಬಂದಿದ್ದಾರೆ. ಆದರೆ ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 1984 ರಿಂದ ಇಲ್ಲಿಯವರೆವಿಗೆ ಕಾಂಗ್ರೆಸ್ ಪಕ್ಷಕ್ಕೆ ಸಮರ್ಥ ಅಭ್ಯರ್ಥಿ ಸ್ಪರ್ಧಿಸದಿದ್ದ ಪರಿಣಾಮ ದಲಿತರ ಮತಗಳು ಕ್ಷೇತ್ರದಲ್ಲಿ ಬೇರೆಬೇರೆ ಪಕ್ಷಗಳಿಗೆ ಹೋಗುತ್ತಿದ್ದವು. ಆದರೆ ಈಗ ವಿದ್ಯಾವಂತ, ಅಭಿವೃದ್ಧಿ ಚಿಂತಕ, ಸರಳ ವ್ಯಕ್ತಿತ್ವದ ಕಿರಣ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿರುವುದ–ರಿಂದ ವಿಭಜನೆಯಾಗಿರುವ ದಲಿತರ ಮತಗಳನ್ನು ಈ ಭಾರಿ ಕಾಂಗ್ರೆಸ್‌ಗೆ ಬೀಳುವುದು ನಿಶ್ಚಿತ ಎಂದರು.

ದಲಿತ ಸಂಘರ್ಷ ಸಮಿತಿಯ ಸಂಘಟನಾ ಸಂಚಾಲಕರಾದ ಜೆ.ಸಿ.ಪುರದ ಆರ್.ಗೋವಿಂದಯ್ಯ ಅವರು ಮಾತನಾಡಿ ಸಿದ್ದರಾಮಯ್ಯ ಅವರು ನುಡಿದಂತೆ ಸರ್ಕಾರ ಮಾಡಿ ಅನ್ನಭಾಗ್ಯ, ಕ್ಷೀರಭಾಗ್ಯ ಸೇರಿದಂತೆ ಅನೇಕ ಭಾಗ್ಯಗಳನ್ನು ಕೊಟ್ಟಿದ್ದಾರೆ. ರಾಜ್ಯದ ರೈತರ ಸಾಲಮನ್ನ ಮಾಡಿ ರೈತರ ಹಿತ ಕಾಪಾಡಿದ್ದಾರೆ. ಅಲ್ಲದೆ ಕಾಂಗ್ರೆಸ್ ಸರ್ಕಾರ ಮೊದಲಿನಿಂದಲೂ ಬಡವರು, ರೈತರು, ಕೂಲಿಕಾರ್ಮಿಕರ ಪರವಿದ್ದು ಜಾತಿಧರ್ಮದ ತಾರತಮ್ಯವಿಲ್ಲದೆ ಸಹಾರ್ದತೆಯಿಂದ ರಾಜ್ಯ ಕಟ್ಟಿದ್ದಾರೆ. ಹಾಗಾಗಿ ರಾಜ್ಯದ ಜನ ನೆಮ್ಮದಿಯಿಂದ ಭಾಳ್ವೆ ಮಾಡಬೇಕೆಂದಿದ್ದರೆ ಕೆ.ಎಸ್.ಕಿರಣ್‌ಕುಮಾರ್ ಅವರನ್ನು ಗೆಲ್ಲಿಸುವ ಮೂಲಕ ಕಾಂಗ್ರೆಸ್ ಸರ್ಕಾರ ರಚನೆಯಾಗಲು ಎಲ್ಲರೂ ಸಹಕರಿಸುವಂತೆ ಕೇಳಿಕೊಂಡರು.

ಜಿಪಂ ಮಾಜಿ ಸದಸ್ಯ ಈರಣ್ಣ, ದಲಿತ ಸಂಘಟನೆಯ ಮುಖಂಡರಾದ ನಾರಾಯಣರಾಜ್, ಕೃಷ್ಣಮೂರ್ತಿ, ಲಿಂಗರಾಜು, ಬರಕನಹಾಲ್ ಗಂಗಾಧರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬೆಳ್ಳಿ ಗದೆ ನೀಡಿ ಹನುಮಾನ ದೇವರಿಗೆ ಹರಕೆ ತೀರಿಸಿದ ಭಕ್ತ

ತಾಳಿಕೋಟೆ: ಪಟ್ಟಣದ ವಿಶ್ವ ಕರ್ಮ ಸಮಾಜದ ಅಧ್ಯಕ್ಷ ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಶ್ರೀನಿವಾಸ ಸೋನಾರ ಎಂಬ ಕುಟುಂಭದವರು ಪಟ್ಟಣದ ಪುರಾತನ ದೇವಾಲಯವಾದ ಶ್ರೀ ಬಜಾರ ಹನುಮಾನ ದೇವರಿಗೆ ಕಳೆದ 10 ವರ್ಷಗಳ ಹಿಂದೆ ಹೊತ್ತ ಹರಕೆಯು ಕಾರ್ಯಗತವಾಗಿದ್ದ–ರಿಂದ ಕಳೆದ ದಿ.6ರಂದು ಶ್ರೀ ಹನುಮ ಜಯಂತಿ ದಿನದಂದು ಬೆಳ್ಳಿಯ ಗದೆಯನ್ನು ಹನುಮಾನ ಮಂದಿರದ ಅರ್ಚಕರಿಗೆ ನೀಡಿ ತಮ್ಮ ಹರಕೆ ತೀರಿಸಿದ್ದಾರೆ.

ಶ್ರೀನಿವಾಸ ಕುಟುಂಭದವರು 10 ವರ್ಷಗಳ ಹಿಂದೆಯೇ ತಮ್ಮ ಮಕ್ಕಳ ವಿದ್ಯಾಭ್ಯಾಸ ಕು–ರಿತು ಮತ್ತು ಕುಟುಂಭದ ಜೀವನ ಆದರ್ಶಪ್ರಾಯವಾಗಿ ಸಾಗಲೆಂದು ಶ್ರೀ ಹನುಮಾನ ದೇವರಿಗೆ ಬೇಡಿಕೊಂಡು ಹರಕೆ ಹೊತ್ತಿದ್ದರಂತೆ ತಮ್ಮ ಅಪೇಕ್ಷೆಯ ಇಚ್ಚೆ ಇಡೇರಿದ್ದರಿಂದ ತಮ್ಮ ಕುಟುಂಭದ ಜೀವನ ಅಪೇಕ್ಷೆಯಂತೆಯೇ ಸಾಗಿದ್ದ–ರಿಂದ ತಮ್ಮ ಮಕ್ಕಳು ಒಳ್ಳೆಯ ವಿದ್ಯಾಭ್ಯಾಸ ಮುಗಿಸಿ ಉನ್ನತ ಸ್ಥಾನಮಾನಕ್ಕೆ ಮುಂದಾಗಿದ್ದರಿಂದ ಹನುಮ ದೇವರಿಗೆ ಬೆಳ್ಳಿ ಗದೆ ನೀಡುವ ಅಪೇಕ್ಷೆಯಂತೆ ಹೊತ್ತ ಹರಕೆಯನ್ನು ಹನುಮ ಜಯಂತಿ ಹುಣ್ಣಿಮೆಯ ದಿನದಂದು ಪ್ರಮುಖ ರಸ್ತೆಯಲ್ಲಿ ಸಾಗಿ ಬರುತ್ತಿದ್ದ ಫಲ್ಲಕ್ಕಿ ಉತ್ಸವದಲ್ಲಿ ಪಾಲ್ಗೊಂಡ ಈ ಕುಟುಂಭದವರು ಬೆಳ್ಳಿ ಗಧೆಯನ್ನು ಹನುಮಾನ ಮಂದಿರದ ಅರ್ಚಕ–ರಿಗೆ ನೀಡಿ ಭಕ್ತಿಭಾವ ಮೆರೆದಿದ್ದಾರೆ.

ಈ ಸಮಯದಲ್ಲಿ ಶ್ರೀನಿವಾಸ ಸೋನಾರ ಅವರ ಧರ್ಮ ಪತ್ನಿ ಸುನಿತಾ ಶ್ರೀನಿವಾರ, ಸಹೋದರ ಉದಯಕುಮಾರ, ಸೌಮ್ಯ, ಪುತ್ರ ವೇಂಕಟೇಶ ಪ್ರಸಾದ, ವಿನಾಯಕ



ಸೋನಾರ ಹಾಗೂ ಅರ್ಚಕರು, ಭಕ್ತವೃಂದದವರು ಪಾಲ್ಗೊಂಡು ಹನುಮ ದೇವರಿಗೆ ತಮ್ಮ ಹರಕೆ ತೀರಿಸಿ ಭಕ್ತಿಭಾವ ಮೆರೆದಿದ್ದಾರೆ.

**ಹನುಮಾನ ಮಂದಿರದಲ್ಲಿ ವಿಶೇಷ ಪೂಜೆ:**

ಬಜಾರ ಹನುಮಾನ ಮಂದಿರದ ಜಯಂತ್ಯೋತ್ಸವವು ಕಳೆದ ವರ್ಷದಂತೆ ಈ ಸಲವು ಅತೀ ವಿಜ್ರುಂಬಣೆಯಿಂದ ಜರುಗಿತು.

ಬೆಳಿಗ್ಗೆ ಶ್ರೀ ಹನುಮಾನ ಮೂರ್ತಿಗೆ ಪಂಚಾಮೃತ ಅಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮ ನಂತರ ತೊಟ್ಟಿಲು ಕಾರ್ಯಕ್ರಮ ಜರುಗಿತು.

ಫಲ್ಲಕ್ಕಿ ಉತ್ಸವದೊಂದಿಗೆ ಸುಮಂಗಲೆಯರಿಂದ ಗಂಗಸ್ಥಳ ಕಾರ್ಯಕ್ರಮ ಜರುಗಿ ಮಂದಿರ ತಲುಪಿತು. ನಂತರ ಸಮಸ್ತ ಭಕ್ತಾಧಿಗಳಿಗೆ ಮಹಾ ಪ್ರಸಾದ ಜರುಗಿತು.

ಈ ಉಸ್ತವದ ನೇತೃತ್ವವನ್ನು ನಾಗಪ್ಪ ಪೂಜಾರಿ, ಹಣಮಂತ ಪೂಜಾರಿ, ಯಂಕಣ್ಣ, ದೇವೇಂದ್ರ, ಸಂತೋಷ, ಭೀಮಣ್ಣ, ಮುತ್ತಣ್ಣ, ಬಸವರಾಜ, ಕೃಷ್ಣಾಜಿ, ನಟ–ರಾಜ, ನವೀನ ಮೊದಲಾದವರು ವಹಿಸಿದ್ದರಲ್ಲದೇ ಈ ಮಹಾ ಪೂಜಾ ಕಾರ್ಯಕ್ರಮದಲ್ಲಿ ತಾಳಿಕೋಟೆಯ ಭಕ್ತಾಧಿಗಳು ಪಾಲ್ಗೊಂಡು ಶ್ರೀ ಹನುಮ ದೇವರ ಕೃಪೆಗೆ ಪಾತ್ರರಾದರು.

## ಚಿಕಿತ್ಸೆ ಫಲಕಾರಿಯಾಗದೆ ಯುವತಿಯರಿಬ್ಬರು ಸಾವು



ಬೆಳ್ತಂಗಡಿ: ಯುವತಿಯರು ಚಿಕಿತ್ಸೆ ಫಲಕಾರಿಯಾಗಿದೆ ಮೃತಪಟ್ಟ ಘಟನೆ ಶುಕ್ರವಾರ ಬೆಳಗಿನ ಜಾವ ನಡೆದಿದೆ.

ಪಟ್ರೂರು ಬಾಬು ಅವರ ಪುತ್ರಿ ರಕ್ಷಿತಾ (22) ಮಂಗಳೂರು ಖಾಸಗಿ ಆಸ್ಪತ್ರೆಯಲ್ಲಿ ಮುಂಜಾನೆ ಮೃತಪಟ್ಟಿದ್ದಾರೆ.

ನೆರೆ ಮನೆಯವರಾದ ಶ್ರೀನಿವಾಸ ಆಚಾರ್ಯ ಅವರ ಪುತ್ರಿ ಲಾವಣ್ಯ (21) ಮಧ್ಯಾಹ್ನ ಮೃತಪಟ್ಟರೆನ್ನಲಾಗಿದೆ. ಇವರಲ್ಲಿ ರಕ್ಷಿತಾ ವಿಷ ಪದಾರ್ಥ ಸೇವಿಸಿರುವುದು ಮರಣೋತ್ತರ ಪರಿಕ್ಷೆಯಲ್ಲಿ ದೃಢಪಟ್ಟಿದೆ. ಲಾವಣ್ಯಾ ಸಾವಿಗೆ ಕಾರಣ ಇನ್ನಷ್ಟೇ ತಿಳಿಯಬೇಕಿದೆ. ಹೊಟ್ಟೆ ನೋವಿನಿಂದ ನರಳಿ ಮಂಗಳೂರಿನ ಆಸ್ಪತ್ರೆಗೆ ದಾಖಲಾದ ಅಕ್ಕಪಕ್ಕದ ಮನೆಯ ಇಬ್ಬರು ಚಿಕಿತ್ಸೆ ದಾಖಲಾಗಿದರು. ಚಿಕಿತ್ಸೆ ಫಲಕಾರಿಯಾಗಿದೆ ಮೃತಪಟ್ಟದ್ದಾರೆ.

ಎ. 4ರಂದು ಸಂಜೆ ರಕ್ಷಿತಾ ಮತ್ತು ಲಾವಣ್ಯ ಮನೆಯಲ್ಲಿ ಹೊಟ್ಟೆ ನೋವೆಂದು ಹೇಳಿ ನರಳಾಡಿ ತೀವ್ರ ಅಸ್ವಸ್ಥಗೊಂಡಿದ್ದರು. ಇಬ್ಬರನ್ನು ಸ್ಥಳೀಯರ ಸಹಕಾರದಲ್ಲಿ ನೆಲ್ಯಾಡಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿತ್ತು. ರಕ್ಷಿತಾರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮನೆಯವರು ಮಂಗಳೂರು ಆಸ್ಪತ್ರೆಗೆ ದಾಖಲಿಸಿದ್ದರು. ಲಾವಣ್ಯರನ್ನು ಅವರ ಮನೆಯವರು ಪುತ್ತೂರು ಆಸ್ಪತ್ರೆಗೆ ಕರೆದೊಯ್ದು ಬಳಿಕ ಸುರತ್ಕಲ್ನ ಆಸ್ಪತ್ರೆಗೆ ದಾಖಲಿಸಿದ್ದರು.

# ಬೆಳಗಾವಿ: ಸಾಹಿತ್ಯ ಪ್ರತಿಷ್ಠಾನದ ವಿವಿಧ ಪ್ರಶಸ್ತಿ ಪ್ರಕಟ

ಬೆಳಗಾವಿ: ಬೆಳಗಾವಿ ಜಿಲ್ಲಾ ಸಾಹಿತ್ಯ ಪ್ರತಿಷ್ಠಾನವು 2022 ನೇ ಸಾಲಿನ ಸಿರಿಗನ್ನಡ ಗೌರವ ಮತ್ತು 2021 ನೇ ಸಾಲಿನ ಸಿರಿಗನ್ನಡ ಪುಸ್ತಕ ಪ್ರಶಸ್ತಿಯನ್ನು ಪ್ರಕಟಿಸಿದೆ.

ಸಿರಿಗನ್ನಡ ಗೌರವ ಪ್ರಶಸ್ತಿಗೆ ಪ್ರೋ ರಾಜಶೇಖರ ಎಂ ಕರಡಿಗುದ್ದಿ ಮತ್ತು ಡಾ ಮಾಧವ ದಿಕ್ಷಿತ ಭಾಜನರಾಗಿದ್ದಾರೆ. ಸಿರಿಗನ್ನಡ ಪುಸ್ತಕ ಪ್ರಶಸ್ತಿಗೆ ಶ್ರೀ ಈರಯ್ಯ ಕಿಲ್ಲೇದಾರ ಅವರ ವೈಚಾರಿಕ ಲೇಖನ ಸಂಗ್ರಹ "ಉರಿಯ ಪೇಟೆಯಲ್ಲಿ" ಕೃತಿ ಮತ್ತು ಶ್ರೀ ಚಂದ್ರಶೇಖರ ಪೂಜಾರ ಅವರ ಗಜಲ್ ಸಂಕಲನ "ಬೆಳಕ ನಿಚ್ಚಣಿಕೆ" ಕೃತಿ ಆಯ್ಕೆಯಾಗಿರುತ್ತದೆ.

**ವಿವಿಧ ಜೀವನಮಾನ ಸಾಧನೆ ಪ್ರಶಸ್ತಿಗಳು:**

ಪ್ರೋ ಪ್ರಲ್ಹಾದಕುಮಾರ ಬಾಗೋಜಿ ದತ್ತಿ ಪ್ರಶಸ್ತಿ ಲೇಖಕರ ಜೀವಮಾನ ಸಾಧನೆಗಾಗಿ ಡಾ ಸಿ ಕೆ ನಾವಲಗಿ, ಡಾ ಲತಾ ಗುತ್ತಿ ದತ್ತಿ ನಿಧಿ ಪ್ರಶಸ್ತಿ ಲೇಖಕಿಂ–ಯರ ಜೀವನಮಾನ ಸಾಧನೆಗಾಗಿ ಶ್ರೀಮತಿ ಶೀಲಾ ಅಂಕೋಲಾ, ದಿ ಸುಮನ ಗುರುನಾಥ ಹುದಲಿ ದತ್ತಿ ನಿಧಿ ಪ್ರಶಸ್ತಿ ಸಾಮಾಜಿಕ ಮತ್ತು ಸಹಕಾರಿ ಕ್ಷೇತ್ರದ ಸಾಧನೆಗಾಗಿ ಶೈಲಜಾ ಬಿಂಗೆ, ದಿ, ವಂ ಲ. ಜೋಶಿ ಸ್ಮಾರಕ ದತ್ತಿ ಪ್ರಶಸ್ತಿಗೆ ಬಾಳೇಶ ವೀರಪ್ಪ ಚಿನಗುಡಿ (ಮಾಧ್ಯಮಿಕ), ತಾರಾಮತಿ ಪರ್ವತರಾಜ ಪಾಟೀಲ ದತ್ತಿ ಪ್ರಶಸ್ತಿ ಜಿಲ್ಲೆಯ ಉತ್ತಮ ಪ್ರಕಾಶನ ಸಂಸ್ಥೆಗೆ ರಾಜಗುರು ಸಂಸ್ಥಾನಮಠ ಪ್ರಕಾಶನ, ಕಿತ್ತೂರು, ಸಂಗೀತ ಪ್ರತಿಷ್ಠಾನ ಬೆಳಗಾವಿಯ ದತ್ತಿ ನಿಧಿಯ "ವೇಣುಗಾನ ಸಂಗೀತ ಪ್ರಶಸ್ತಿ"ಗೆ ಮುಕುಂದ ಗೋರೆ ಇವರಿಗೆ ನೀಡಲಾಗಿದೆ.


ವಿವಿಧ ದತ್ತಿ ನಿಧಿ ಪುಸ್ತಕ ಪ್ರಶಸ್ತಿಗಳು:

ಕೆ ಚಂದ್ರಮೌಳಿ ದತ್ತಿನಿಧಿ ಪ್ರಶಸ್ತಿ. ಡಾ ಬಸವರಾಜ ಜಗಜಂಪಿಯವರ ಪ್ರವಾಸ ಕಥನ "ಯೂರೋಪ ಸಾಂಸ್ಕೃತಿಕ ಸೌರಭ" ಕೃತಿಗೆ, ಪಿ ವಿಜಯಕುಮಾರ ದತ್ತಿ ಪ್ರಶಸ್ತಿ – ಬಿ ಎಸ್ ಜಗಾಪುರ ಅವರ ಮಕ್ಕಳ ಸಾಹಿತ್ಯ "ಜಾಣ ಬಾಲಕ" ಕೃತಿಗೆ, ದಿ ಶ್ರೀದೇವಿ ದಾಸಪ್ಪ ಶಾನಬಾಗ ಸ್ಮಾರಕ ದತ್ತಿ ಪ್ರಶಸ್ತಿ ಶ್ರೀ ಡಾ ಜೆ ಪಿ ದೊಡ್ಡಮನಿ ಅವರ ಅನುವಾದ ಸಾಹಿತ್ಯ "ಭಾರತ ದೇಶದ ಪ್ರಥಮ ಶಿಕ್ಷಕಿ–ಸಾವಿತ್ರಿಬಾಯಿ ಫುಲೆ" ಕೃತಿಗೆ, ಡಾ ಹಣಮಂತರಾವ ಸವಣೂರ ಸ್ಮಾರಕ ದತ್ತಿ ಪ್ರಶಸ್ತಿಗೆ ಶ್ರೀ ಬಸವಣ್ಣೆಪ್ಪ ಕಂಬಾರ ಅವರ ಕಥಾ ಸಂಕಲನ "ಆರನೇ ಬೆರಳು" ಕೃತಿಗೆ, ಶ್ರೀ ಎಸ್ ಎಮ್ ಕುಲಕರ್ಣಿ ಷಷ್ಠಬ್ಧಿ ಸಮಿತಿ ದತ್ತಿ ನಿಧಿ ಪ್ರಶಸ್ತಿ ಡಾ ಬಸು ಬೇವಿನಗಿಡದ ಅವರ ವಿಮರ್ಶಾ "ಬೆಳಕ ತೋರಣ" ಕೃತಿಗೆ, ದಿ ಚಂದ್ರವ್ವ ಧರ್ಮಾಜಿ ಅನಗೋಳ ಸ್ಮಾರಕ ದತ್ತಿ ಪ್ರಶಸ್ತಿ ಡಾ ಶೋಭಾ ನಾಯಕ ಅವರ ಅವನ ಸಂಕಲನ "ಶಯ್ಯಾಗಾರದ ಸುದ್ದಿಗಳು ಕೃತಿಗೆ, ಡಾ ಎಮ್ ಎಲ್ ತುಕ್ಕಾರ ಅಭಿನಂದನ ಸಮಿತಿ ದತ್ತಿ ಪ್ರಶಸ್ತಿ ಶ್ರೀಮತಿ ರಂಜನಾ ನಾಯಿಕ ಅವರ ನಾಟಕ ಸಂಕಲನ– "ಇಪ್ಪತ್ತೊಂದು ನೆರಳು ಬೆಳಕಿನಾಟ" ಕೃತಿಗೆ, ಶಿವಕವಿ ಉಳವೀಶ ಹುಲೆಪ್ಪನವರ ಸ್ಮಾರಕ ದತ್ತಿ ನಿಧಿ ಪ್ರಶಸ್ತಿ ಚುಟುಕು ಸಾಹಿತ್ಯ – ಅಶೋಕ ಮಳಗಲಿ ಅವರ "ನೂರೊಂದು ಚುಟುಕು ಚಟಾಕಿಗಳು" ಕೃತಿಗೆ, ಅಪ್ಪಾಸಾಹೇಬ ಸದರಜೋಶಿ ಕುಟುಂಬದ ದತ್ತಿ ಪ್ರಶಸ್ತಿ ವೈಚಾರಿಕ ಲೇಖನಗಳು ಡಾ ಆರ್ ಬಿ ಚಿಲಮಿ ಅವರ "ಬದುಕಿನ ಅನ್ಯನ್ಯತೆಗೆ ದಾರಿದೀಪಗಳು" ಕೃತಿಗೆ ನೀಡಲಾಗಿದೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ನೀರಜಾ ಗಣಾಚಾರಿ ಪ್ರಟಣೆಯಲ್ಲಿ ತಿಳಿಸಿದ್ದಾರೆ.

2021 ನೇ ಸಾಲಿನ ಪುಸ್ತಕಗಳನ್ನು ಬಿ ಆರ್ ಪೊಲೀಸ್‌ಪಾಟೀಲ ಮತ್ತು ಶ್ರೀಮತಿ ಸಂಧ್ಯಾ ಹೊನಗುಂಟಕರ ಅವರು ಮೌಲ್ಯಮಾಪನ ಮಾಡಿರುತ್ತಾರೆ.

ಅವರಿಗೆ ಬೆಳಗಾವಿ ಸಾಹಿತ್ಯ ಪ್ರತಿಷ್ಠಾನವು ಚಿರಋಣಿಯಾಗಿರುತ್ತದೆ. ಎಲ್ಲ ಪ್ರಶಸ್ತಿಗೆ ಭಾಜನರಾದ ಮಹನೀಯ–ರಿಗೆ ಪ್ರತಿಷ್ಠಾನದ ಅಧ್ಯಕ್ಷರಾದ ಎಸ್ ಎಮ್ ಕುಲಕರ್ಣಿಯವರು ಅಭಿನಂದಿಸಿ, ಪ್ರಶಸ್ತಿ ಪ್ರದಾನ ಸಮಾರಂಭದ ದಿನಾಂಕ ನಿಗದಿಯಾದ ಮೇಲೆ ತಿಳಿಸಲಾಗುತ್ತದೆ, ದಯಮಾಡಿ ಕಾರ್ಯಕ್ರಮಕ್ಕೆ ಹಾಜ–ರಿದ್ದು ಪ್ರಶಸ್ತಿಯನ್ನು ಸ್ವೀಕ–ರಿಸಬೇಕೆಂದು ಈ ಮೂಲಕ ವಿನಂತಿಸಿರುತ್ತಾರೆ.

## ಬಿಸಿಲಿನ ತಾಪಕ್ಕೆ ತಂಪೆರೆದ ಮಳೆರಾಯ ರೈತಾಪಿ ಜನರಲ್ಲಿ ಮಂದಹಾಸ



ಹುಕ್ಕೇರಿ: ಹುಕ್ಕೇರಿ ತಾಲೂಕಿನ ವಿವಿಧೆಡೆ ಇಂದು ಬೆಳ್ಳಂಬೆಳಿಗ್ಗೆ ಸಿಡಿಲು ಸಹಿತ ಭಾರಿ ಮಳೆ ಸುರಿದಿದೆ. ಬಿಸಿಲಿನ ತಾಪಕ್ಕೆ ರೋಸಿ ಹೋಗಿದ್ದ ಜನರಿಗೆ ಮಳೆರಾಯ ತಂಪೆರೆದಿದ್ದಾನೆ.

ಪಟ್ಟಣ ಸೇರಿದಂತೆ ಬೆಳವಿ, ಶೇಲಾಪೂರ ಹಾಗೂ ತಾಲ್ಲೂಕಿನ ವಿವಿಧೆಡೆ ಭಾರಿ ಪ್ರಮಾಣದ ಅಕಾಲಿಕ ಮಳೆಯಾಗಿದ್ದು, ಯಾವುದೇ ಮುನ್ಸುಚನೆ ಇಲ್ಲದೆ ಬಂದಿದ್ದ ಪ್ರಯಾಣಿಕರು ಮಳೆಯಿಂದ ಕೆಲ ಕಾಲ ಪರದಾಡುವಂತಾಯಿತು. ಇನ್ನು ಕೂಡ ಮೋಡ ಮುಸುಕಿದ ವಾತಾವರಣ ಮುಂದುವರೆದಿತ್ತು

ಜನರ ವಾಡಿಕೆಯಂತೆ ಈ ವರ್ಷ ಕಾಮಣ್ಣ ಬೂದಿಯ ಮೇಲೆ ಮಳೆ ಸು–ರಿದಿದ್ದರಿಂದ ಓ ವರ್ಷ ಮುಂಗಾರು ಮಳೆ ಉತ್ತಮ ವಾಗುತ್ತದೆ ಎಂಬುದು ರೈತರು ಅನಿಸಿಕೆ.ಮಳೆರಾಯ ಆಕಸ್ಮಿಕವಾಗಿ ಸುರಿದ ಮಳೆಯಿಂದ ರೈತಾಪಿ ಜನರು ಖುಷಿ ಪಟ್ಟರು. ಅಕ್ಟೋಬರ ತಿಂಗಳಿನಿಂದ ಅಡ್ಡ ಮಳೆಯಾಗಿರಲಿಲ್ಲ. ಈ ಮಳೆಯಿಂದ ಮುಂಗಾರು ಮಳೆ ಆಶಾದಾಯಕವಾಗಿದೆ. ಜನರಲ್ಲಿ ಮಂದಹಾಸ ಮೂಡಿದೆ.

## ಸಿದ್ಧಾರೂಢ ಆಶ್ರಯದಲ್ಲಿ ಸದ್ವಿಚಾರ ಕಾರ್ಯಕ್ರಮ

ಹುಕ್ಕೇರಿ: ಗುರು ವಚನವು ಅಮೃತಕ್ಕೆ ಸಮಾನ, ಹೃದಯದಲ್ಲಿ ಇಳಿಸಿಕೊಂಡರೆ ಜೀವನ ಪಾವನ ಎಂದು ಶರಣ ಮಾರುತಿ ಮಗದುಮ್ಮ ಹೇಳಿದರು.

ಅವರು ಕೊಟಬಾಗಿಯ ಸಿದ್ದಾರೂಡ ಆಶ್ರಮದಲ್ಲಿ ಸದ್ವಿಚಾರ ಚಿಂತನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಂದು ಹಲವು ದೃಷ್ಟಾಂತಗಳಿಂದ ಮನಮುಟ್ಟುವಂತೆ

ಪೀಠಾಧಿಪತಿಗಳಾದ ಪ್ರಭುದೇವ ಮಹಾಸ್ವಾಮಿಗಳು ಕಲ್ಮಠ ಸಾನಿಧ್ಯ ವಹಿಸಿದ್ದರು. ಆರ್ಯುವೇದ ತಜ್ಞರಾದ ರಮೇಶ ಮ. ಪಾಟೀಲ ಮಾನವನ ಆರೋಗ್ಯದಲ್ಲಿ ನೀರಿನ ಮಹತ್ವದಾಗಿದೆ. ಮಹರ್ಷಿಗಳ ಆರೋಗ್ಯ ಸೂತ್ರಗಳಲ್ಲಿ ಒಂದಾದ "ಊಟದ ನಂತರ ತಕ್ಷಣ ನೀರು ಕುಡಿಯಬಾರದು" ಸೂತ್ರದ



ಬಗ್ಗೆ ಸವಿಸ್ತಾರವಾಗಿ ವಿವರಿಸಿದರು

ಚಿಪ್ಪಲಕಟ್ಟಿಯ ಮಾತೋಶ್ರೀ. ಕಲಾವತಿ ಅಮ್ಮನವರು ಗುರು ವಚನಕ್ಕೆ ಸರಿಸಾಟಿ ಈ ಪ್ರಪಂಚದಲ್ಲಿ ಯಾವುದು ಇಲ್ಲ, 'ಹರ ಮುನಿದರೆ ಗುರು ಕಾಯ್ವನು' ಎಂಬುವದನ್ನು ಮನಮುಟ್ಟುವಂತೆ ವಿವರಿಸಿದರು.

ಪರಮ ಪೂಜ್ಯ ಶ್ರೀ ಪ್ರಭುದೇವ ಮಹಾಸ್ವಾಮಿಗಳು ಕಿರೀಟ ಪೂಜೆ ನಡೆಯಿತು ಕಾರ್ಯಕ್ರಮ ಮುಕ್ತಾಯವಾಯಿತು. ದಾಸೋಹ ದಾನಿ ಶರಣರಾದ ಶ್ರೀಮತಿ. ಭಾರತಿ ಮಲ್ಲಪ್ಪ ಪದ್ಮಣ್ಣವರ ಸತ್ಕ–ರಿಸಲಾಯಿತು. ಶ್ರೀ ದುರ್ಗಾದೇವಿ ಭಜನಾ ಮಂಡಳ ಕೊಟಬಾಗಿ ಸಂಗೀತ ಸೇವೆ ಜರುಗಿತು.

# ಇಂದಿನಿಂದ ಹುಳಿಯಾರು ದುರ್ಗಮ್ಮನ ಜಾತ್ರೆ

ಹುಳಿಯಾರು : ಹುಳಿಯಾರು ಗ್ರಾಮದೇವತೆ ಶ್ರೀದುರ್ಗಾ ಪರಮೇಶ್ವರಿ ದೇವಿಯ 51 ನೇ ವರ್ಷದ ಜಾತ್ರಾಮಹೋತ್ಸವ ಏ.8 ರ ಶನಿವಾರದಿಂದ ಪ್ರಾರಂಭಗೊಂಡು ಏ.16 ರ ಭಾನುವಾರದವರೆಗೆ ಒಂಬತ್ತು ದಿನಗಳ ಕಾಲ ಜರುಗಲಿದೆ.

ಏ.8 ರ ಶನಿವಾರ ಕೋಡಿಪಾಳ್ಯ, ಲಿಂಗಪ್ಪನ ಪಾಳ್ಯದವರಿಂದ ಹಾಗೂ ಏ.9 ರ ಭಾನುವಾರ ಕಾಮಶೆಟ್ಟಿಪಾಳ್ಯ, ಸೋಮಜ್ಜನ ಪಾಳ್ಯದ ಭಕ್ತಾಧಿಗಳಿಂದ ಅಮ್ಮನವರಿಗೆ ಮಡಿಲಕ್ಕಿಸೇವೆ ನಡೆಯಲಿದೆ.

ಏ.10 ರ ಸೋಮವಾರ ಬೆಳಿಗ್ಗೆ ಎಡೆಸೇವೆ, ಸಂಜೆ ಅಮ್ಮನವರ ಮಧುವಣಗಿತ್ತಿ ಕಾರ್ಯ ಹಾಗೂ ಧ್ವಜಾರೋಹಣ ಮತ್ತು ಅಂಕುರಾರ್ಪಣೆ ಕಾರ್ಯ ನಡೆಯಲಿದೆ.

ಏ.11 ರ ಮಂಗಳವಾರ ಗ್ರಾಮಸ್ಥರಿಂದ ಆರತಿಬಾನ, ಎಡೆಸೇವೆ ನಡೆಯಲಿದೆ.



ಏ.12 ರ ಬುಧವಾರ ರಾತ್ರಿ ಹುಳಿಯಾರಿನ ಹುಳಿಯಾರಮ್ಮ, ಕೆಂಚಮ್ಮ, ಹೊಸಹಳ್ಳಿಯ ಶ್ರೀ ಕೊಲ್ಲಾಪುರದಮ್ಮ, ಹೊಸ ಹಳ್ಳಿಪಾಳ್ಯದ ಅಂತರಘಟ್ಟೆಅಮ್ಮ, ಗೌಡಗೆರೆಯ ದುರ್ಗಮ್ಮ, ತಿರು ಮಲಾಪುರದ ಕೊಲ್ಲಾಪುರದಮ್ಮ, ಕೆ.ಸಿ.ಪಾಳ್ಯದ ಅಂತರಘಟ್ಟಮ್ಮ, ದೇವರುಗಳ ಆಗಮನದೊಂದಿಗೆ ಕೂಡುಭೇಟಿ ನಡೆದು ನಂತರ ಗಂಗಾಸ್ನಾನಕ್ಕೆ ಕೆರೆಗೆ ದಯಮಾಡಿಸುವುದು.ಏ.13 ರ ಗುರುವಾರ ಮುಂಜಾನೆ 6 ಕ್ಕೆ ಕಳಸ ಸಮೇತ ನಡೆಮುಡಿಯಲ್ಲಿ ಅಮ್ಮನವರ ಮೂಲಸ್ಥಾನಕ್ಕೆ ದಯಮಾಡಿಸುವುದು. ಅದೇ ದಿನ ರಾತ್ರಿ ಉಯ್ಯಾಲೋತ್ಸವ ನಡೆಯಲಿದೆ. ಏ.14 ರ ಶುಕ್ರವಾರ ಮಧ್ಯಾಹ್ನ ಅಮ್ಮನವರ ವೈಭವಯುತ ಬ್ರಹ್ಮರಥೋತ್ಸವ ನಡೆದು ನಂತರ ವಸಂತಸೇವೆ ಹಾಗೂ ಅನ್ನಸಂತರ್ಪಣೆ ನಡೆಯಲಿದೆ. ಅದೇ ದಿನ ರಾತ್ರಿ ವಿನಾಯಕನಗರದ ದುರ್ಗಮ್ಮನ ಮದಾಲ್ ಸಿ ಉತ್ಸವ ಜರುಗಲಿದೆ.

ಏ.15 ರ ಶನಿವಾರ ಸಿಡಿ, ಓಕಳಿ ಸೇವೆ, ಕಂಕಣ ವಿಸರ್ಜನೆ, ಏ.16 ರ ಭಾನುವಾರದಂದು ಮಡಿಲಕ್ಕಿ ಸೇವೆ ನಡೆಯುವ ಮೂಲಕ ಜಾತ್ರೆಗೆ ತೆರೆ ಬೀಳಲಿದೆ.ಹುಳಿಯಾರು ಹಾಗೂ ಸುತ್ತಮುತ್ತಲ ಗ್ರಾಮಗಳ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಅಮ್ಮನವರ ಕೃಪೆಗೆ ಪಾತ್ರರಾಗುವಂತೆ ಧರ್ಮದರ್ಶಿ ಎಸ್‌ಆರ್‌ಎಸ್ ದಯಾನಂದ್ ಹಾಗೂ ಕನ್ವೀನರ್ ಪಟೇಲ್ ರಾಜಕುಮಾರ್ ಕೋರಿದ್ದಾರೆ.



ಹುಕ್ಕೇರಿ: ತಾಲೂಕಿನ ಯಮಕನಮರಡಿಯಲ್ಲಿ ಶುಕ್ರವಾರ ಚುನಾವಣೆ ಹಿನ್ನೆಲೆ ಯಮಕನಮರಡಿ ಪ್ರಮುಖ ಬೀದಿಗಳಲ್ಲಿ ಸೈನ್ಯ ತುಕಡಿಗಳು ಪಥ ಸಂಚಲನ ಮಾಡಿ ಸಾರ್ವಜನಿಕರಲ್ಲಿ ಚುನಾವಣೆ ಸಂದರ್ಭದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಪಥ ಸಂಚಲನ ಜಾಗೃತಿ ಮೂಡಿಸಿತು.

## ಸೌದ್ರಿ ರುದ್ರಾಣಿಯವರಿಂದ ವಿಮ್ಸ್ ನೇತ್ರಾಗಾರಕ್ಕೆ ಕಣ್ಣುದಾನ

ಬಳ್ಳಾರಿ: ದಿವಂಗತ ಸೌದ್ರಿ ಷಣ್ಮುಖಪ್ಪನವರ ಧರ್ಮಪತ್ನಿ ರುದ್ರಾಣಿಯವರು ಇತ್ತೀಚೆಗೆ ನಗರದ ವಿಮ್ಸ್ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಅವರಿಗೆ 81ವರ್ಷ ವಯಸ್ಸಾಗಿತ್ತು. ಮಕ್ಕಳು, ಮೊಮ್ಮಕ್ಕಳು ಮತ್ತು ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ನಿಧನ ನಂತರ ಅವರ ಕುಟುಂಬದವರ ಮಾಹಿತಿ ಮೇರೆಗೆ ಎರಡು ಕಣ್ಣುಗಳನ್ನು ವಿಮ್ಸ್ ಆಸ್ಪತ್ರೆಗೆ



ದಾನ ಮಾಡಿದ್ದಾರೆ. ರಕ್ತದಾನ ಮಾಡಲು ಹೆದರುವ ಇಂದಿನ ಯುವಕರಿಗೆ ಇಳಿವಯಸ್ಸಿನಲ್ಲೂ ನೇತ್ರದಾನ ಮಾಡುವ ಮೂಲಕ ಯುವಕ–ರಿಗೆ ಸ್ಪೂರ್ತಿಯಾಗಿದ್ದಾರೆ. ಸಾವಿನಲ್ಲೂ ಸಾರ್ಥಕತೆ ಮೆರೆದಿರುವ ರುದ್ರಾಣಿಯವರ ಕುಟುಂಬಕ್ಕೆ ವಿಮ್ಸ್ ಅಧಿಕಾರಿಗಳು ಧನ್ಯವಾದಗಳನ್ನು ತಿಳಿಸಿದ್ದಾರೆ. ದೇವರು ಅವರ ಕುಟುಂಬಕ್ಕೆ ಶಾಂತಿ ನೆಮ್ಮದಿ ಮತ್ತು ದುಖ–ಃವನ್ನು ಭರಿಸುವ ಶಕ್ತಿ ನೀಡಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿರುತ್ತಾರೆ.

# ಕಿತ್ತೂರಿನಲ್ಲಿ ಕೈತಪ್ಪಿದ ಟಿಕೆಟ್: ಕಾಂಗ್ರೆಸ್ ಗೆ ರಿಸೈನ್ ಮಾಡಲು ಡಿ.ಬಿ. ಇನಾಮದಾರ್ ಕುಟುಂಬದ ನಿರ್ಧಾರ



ಬೆಳಗಾವಿ: ಚನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಟಿಕೆಟ್ ಕೈತಪ್ಪಿದ ಹಿನ್ನೆಲೆಯಲ್ಲಿ ಡಿ.ಬಿ. ಇನಾಮದಾರ ಕುಟುಂಬ ಕಾಂಗ್ರೆಸ್‌ನಿಂದ ದೂರ ಉಳಿಯುವ ನಿರ್ಧಾರ ಕೈಗೊಂಡಿದ್ದಾರೆ.

ಕಿತ್ತೂರು ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯನ್ನಾಗಿ ಬಾಬಾಸಾಹೇಬ್ ಪಾಟೀಲ ಅವರನ್ನು ಕಣಕ್ಕಿಳಿಸುವ ನಿರ್ಧಾರ ಹೊರಬೀಳುತ್ತಿದ್ದಂತೆಯೇ ಕಿತ್ತೂರು ಕ್ಷೇತ್ರದಲ್ಲಿ ಬಂಡಾಯದ ಬಿರುಗಾಳಿ ಭುಗಿಲೆದ್ದಿದ್ದು, ಕಾಂಗ್ರೆಸ್ ಪಕ್ಷದ ನಿರ್ಧಾರವನ್ನು ಖಂಡಿಸಿ ಡಿ.ಬಿ ಇನಾಮದಾರ್ ಅಭಿಮಾನಿಗಳು ನೇಗಿನಹಾಳ ಸೇ–ರಿದಂತೆ ವಿವಿಧ ಗ್ರಾಮಗಳಲ್ಲಿ ಪ್ರತಿಭಟನೆ ನಡೆಸಿದ ಬೆನ್ನಲ್ಲಿಯೇ ಡಿ.ಬಿ ಇನಾಮದಾರ್ ಕುಟುಂಬದ ಸದಸ್ಯರು ಕಾಂಗ್ರೆಸ್ ಪಕ್ಷಕ್ಕೆ ಸಾಮೂಹಿಕವಾಗಿ ರಿಸೈನ್ ಮಾಡುವ ನಿರ್ಧಾರ ಕೈಗೊಂಡಿದ್ದಾರೆ.

ಸದ್ಯ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ನೇಗಿನಹಾಳ ಗ್ರಾಮದಲ್ಲಿ ಸಭೆ ನಡೆಸಿದ ಬಳಿಕ ಕುಟುಂಬಸ್ಥರು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಘೋಷಣೆ ಮಾಡಿದ್ದಾರೆ. ನೇಗಿನಹಾಳ ಗ್ರಾಮದ ಡಿ.ಬಿ ಇನಾಮದಾರ್ ಮನೆಯಲ್ಲಿ ಸೇರಿದ ಅಭಿಮಾನಿಗಳನ್ನು ಉದ್ದೇಶಿಸಿ ಮಾತನಾಡಿದ ಡಿ.ಬಿ ಇನಾಮದಾರ್ ಸೊಸೆ ಲಕ್ಷ್ಮೀ ವಿಕ್ರಂ ಇನಾಮದಾರ್, ದೊಡ್ಡ ಧನ್ಯಾರ ಆರೋಗ್ಯ ಸರಿ ಇಲ್ಲ,ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಂಧರ್ಭದಲ್ಲಿ ಕಾಂಗ್ರೆಸ್ ನಮಗೆ ಮತ್ತಷ್ಟು ನೋವು ನೀಡುವ ನಿರ್ಧಾರ ಕೈಗೊಂಡಿದೆ.ನಾವು ಕುಟುಂಬದ ಎಲ್ಲ ಸದಸ್ಯರು ಕಾಂಗ್ರೆಸ್ಸಿಗೆ ರಿಸೈನ್ ಮಾಡಲು ನಿರ್ಧ–ರಿಸಿದ್ದೇವೆ.ಇನ್ಮುಂದೆ ನಮ್ಮು ಕಾಂಗ್ರೆಸ್ ಜೊತೆಗಿನ ಜಾಪ್ಟರ್ ಕ್ಲೋಸ್ ಆಗಿದೆ.ಎಂದು ಹೇಳುವ ಮೂಲಕ ತಮ್ಮ ಅಸಮಾಧಾನ ಹೊರಹಾಕಿದ್ದಾರೆ.


ಡಿ.ಬಿ ಇನಾಮದಾರ್ ಅವರು ಮಾತನಾಡುವ ಸ್ಥಿತಿಯಲ್ಲಿ ಇಲ್ಲ.ನಾವು ಅವರ ಪರವಾಗಿ ಹೇಳಿಕೆ ನೀಡುವಷ್ಟು ದೊಡ್ಡವರೂ ಅಲ್ಲ.ಕಾಂಗ್ರೆಸ್ಸಿನ ರಿಸೈನ್ ಮಾಡುವುದು ಕುಟುಂಬದ ಸದಸ್ಯರ ನಿರ್ಧಾರ ಎಂದು ಹೇಳಿದ ಲಕ್ಷ್ಮೀ ಹೇಳಿದರು.

ಕೊನೆಗೆ ಕಾರ್ಯಕರ್ತರ ಸಭೆ ನಡೆಸಿದ ಬಳಿಕ ನಿರ್ಧಾರ ಪ್ರಕಟಿಸಿದ್ದು,ಕಾಂಗ್ರೆಸ್ ಪ್ರಾಥಮಿಕ ಸದಸ್ಯತ್ವಕ್ಕೆ ಇಡೀ ಕುಟುಂಬದ ರಾಜೀನಾಮೆ ಘೋಷಣೆ ಮಾಡಿದ್ದಾರೆ. ಐದು ಬಾರಿ ಶಾಸಕರಾಗಿದ್ದ ಡಿ.ಬಿ. ಇನಾಮದಾರ, ಸಚಿವರಾಗಿಯೂ ಸೇವೆ ಸಲ್ಲಿಸಿದ್ದರು. ಲಕ್ಷ್ಮೀ ಇನಾಮದಾರ ಅವರಿಗೆ ಟಿಕೆಟ್ ಕೈತಪ್ಪಿದ್ದು ಬಾಬಾಸಾಹೇಬ ಪಾಟೀಲರಿಗೆ ಕಾಂಗ್ರೆಸ್ ಟಿಕೆಟ್ ನೀಡಿದೆ.

# ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಅಧಿಕಾರಕ್ಕೆ ತನ್ನಿ

## ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ

ಬೆಳಗಾವಿ: ಬಡವರು ದೀನ ದಲಿತರು ಸೇರಿದಂತೆ ಎಲ್ಲಾ ವರ್ಗಗಳ ಜನರ ಪಕ್ಷವೆಂದರೆ ಅದು ಕಾಂಗ್ರೆಸ ಪಕ್ಷ ವಾಗಿದೆ ಜನಪರ ಯೋಜನೆಗಳನ್ನು ಜಾರಿ ತಂದು ಅಬಿವೃದ್ಧಿ ಮಾಡುವ ಕಾಂಗ್ರೆಸ ಪಕ್ಷಕ್ಕೆ ಮತ ನೀಡಿ ಗೆಲ್ಲಿಸಿ ಅಧಿಕಾರಕ್ಕೆ ತರಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಹೇಳಿದರು.



ತಾಲೂಕಿನ ಹಂಚಿನಾಳ ಹಾಗೂ ಕುರಣಿವಾಡಿ ಗ್ರಾಮಗಳಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿ, ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರ ಕೊಡುಗೆ ಅಪಾರ, ಸಾಮಾಜಿಕ ನ್ಯಾಯ ಕೊಡುವವಲ್ಲಿ ಕಾಂಗ್ರೆಸ್ ಪಕ್ಷ ದ ಪಾತ್ರ ಮುಖ್ಯ ಎಂದ ಅವರು, ಕಾಂಗ್ರೆಸ ಪಕ್ಷ ತತ್ವ ಸಿದ್ಧಾಂತ. ಜನಪರ ಯೋಜನೆ ಗಳನ್ನು ಜಾರಿಗೆ ತಂದು ಅಭಿವೃದ್ಧಿ ಮಾಡುವ ಮೂಲಕ ಎಲ್ಲಾ ಸಮುದಾಯಗಳ. ಅಭಿವೃದ್ಧಿಯ ಬಯಸುವ ಪಕ್ಷ ಕಾಂಗ್ರೆಸ ಎಂದರು.

ಸಿದ್ಧರಾಮಯ್ಯ ಮುಖ್ಯ ಮಂತ್ರಿಯಾಗಿದ್ದಾಗ ಅನೇಕ ಜನಪರ ಭಾಗ್ಯಗಳನ್ನು ಜಾರಿಗೆ ತಂದಿದ್ದಾರೆ ಅಲ್ಲದೆ ಬಡವರ ಹಾಗೂ ವಿದ್ಯಾರ್ಥಿಗಳ ಹಸಿದು ಹೊಟ್ಟೆ ತುಂಬಿಸಲು ಇಂದಿರಾ ಕ್ಯಾಟೀನ್ ಆರಂಭಿಸಿದರು. ಮಹಿಳೆಯರ ಹಾಗೂ ನಿರುದ್ಯೋಗ ಯುವಕರಿಗಾಗಿ ಅನೇಕ ಹೊಸ ಯೋಜನೆಗಳನ್ನು ಜಾರಿಗೆ ತಂದರು ಎಂದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಭ್ರಷ್ಟಾಚಾರದಲ್ಲಿ ಮುಳುಗಿ ಅಭಿವೃದ್ಧಿ ಹಿನ್ನಡೆಯಾಗಿದೆ. ಇಂದಿನ ಅಗತ್ಯ ವಸ್ತುಗಳ ಬೆಲೆ ಏರಿಕೆ, ನಿರುದ್ಯೊ?ಗ ಹೆಚ್ಚಳಕ್ಕೆ ಬಿಜೆಪಿಯೇ ಕಾರಣ. ಅಚ್ಚೆ?ದಿನ್ ಬರುತ್ತೆ ಎಂದು ಹೇಳಿರುವ ಬಿಜೆಪಿಯವರು ಕಳೆದ 9 ವರ್ಷ ಗತಿಸಿದರೂ ಯಾವ ಅಚ್ಚೆ?ದ್ದಿನ್ ಬರಲಿಲ್ಲ.

ಆದ್ದರಿಂದ ಪ್ರತಿಯೊಬ್ಬರು ಸೇರಿ ಜಾತಿ ಭೇದವಿಲ್ಲದೆ ಸಮಾಜ ಒಗ್ಗೂಡಿಸಿ ಕಾಂಗ್ರೆಸ್ ಪಕ್ಷ ಸಂಘಟಿಸಲು ಪ್ರತಿಯೊಬ್ಬರು ಮುಂದಾಗಬೇಕು ಎಂದರು.

ಎಲ್ಲಡೆ ಭ್ರಷ್ಟಾಚಾರ ಮಿತಿ ಮೀರಿದೆ. ಕಳೆದ ನಾಲ್ಕು ವರ್ಷದಿಂದ ರಾಜ್ಯದ ಜನರು ಸಾಕಷ್ಟು ತೊಂದರೆ ಅನುಭವಿಸಿದ್ದಾರೆ. ಡಬಲ್ ಇಂಜಿನ್ ಸರ್ಕಾರದ ಆಡಳಿತಕ್ಕೆ ಬೇಸತ್ತು ಹಾಗೂ ನಮ್ಮ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಇಂದಿನ ಯುವಕರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ ಎಂದು ತಿಳಿಸಿದರು.

ಭಜರಂಗದಳ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆ: ಪಾಚ್ಛಾಪುರ ಗ್ರಾಮದಲ್ಲಿ ಭಜರಂಗದಳ ಕಾರ್ಯಕರ್ತ ಮಹಾಂತೇಶ್ ಹೊಳೆನ್ನವರ ನೇತೃತ್ವವದಲ್ಲಿ ಇಂದು ನೂರಾರು ಯುವಕರು ಶಾಸಕ ಸತೀಶ್ ಜಾರಕಿಹೊರ ಅವರ ಸಮ್ಮುಖದಲ್ಲಿ ಕಾಂಗ್ರೆಸಗೆ ಸೇರ್ಪಡೆಯಾದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಸೇರ್ಪಡೆಯಾದ ಯುವಕರು ಶಾಸಕ ಸತೀಶ್ ಜಾರಕಿಹೊಳಿ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಸೇರಿದಂತೆ ವಿವಿಧ ಗ್ರಾಮದ ಮುಖಂಡರು ಹಾಗೂ ಯುವಕರು ಇದ್ದರು.

# ಏಳು ಶಿಕ್ಷಕರ ಅಮಾನತು




ಬೆಳಗಾವಿ: ಎಸ್ಸೆಸ್ಸೆಲ್ಸಿ ಪರೀಕ್ಷಾ ಅಕ್ರಮ, ಕರ್ತವ್ಯ ಲೋಪ ಆರೋಪದ ಮೇಲೆ ಬೆಳಗಾವಿಯಲ್ಲೂ 7 ಶಿಕ್ಷಕರನ್ನು ಅಮಾನತುಗೊಳಿಸಿ ಡಿಡಿಪಿಐ ಬಸವರಾಜ ನಾಲತವಾಡ ಆದೇಶ ಹೊರಡಿಸಿದ್ದಾರೆ.

ನಿನ್ನೆಯಷ್ಟೆ ಕಲಬುರಗಿಯಲ್ಲಿ 16 ಶಿಕ್ಷಕರನ್ನು ಅಮಾನತುಗೊಳಿಸಲಾಗಿ–ತ್ತು. ಇದೀಗ ಬೆಳಗಾವಿಯಲ್ಲೂ 7 ಶಿಕ್ಷಕರನ್ನು ಅಮಾನತಿಗೊಳಿಸಿ ಆದೇಶ ಹೊರಡಿಸಲಾಗಿದೆ.

ಪರೀಕ್ಷಾ ಕೇಂದ್ರದಲ್ಲಿ ಕೊಠಡಿ ಮೇಲ್ವಿಚಾರಕರು ಮಕ್ಕಳನ್ನು ಸರಿಯಾಗಿ ತಪಾಸಣೆ ಮಾಡದೇ ಇರುವುದು ಮತ್ತು ಪೋಲಿಸ್ ವ್ಯವಸ್ಥೆ ಸರಿಯಾಗಿ ಮಾಡದೇ ಇರುವುದು, ಶಾಲಾ ಕೊಠಡಿಯ ಹಿಂದುಗಡೆ ಜನ ಓಡಾಡುತ್ತಿರುವುದು, ನಕಲು ಚೀಟಿಗಳನ್ನು ಕೊಠಡಿಯೊಳಗೆ ಎಸೆಯುತ್ತಿರುವುದು ಕಂಡು ಬಂದ ಕಾರಣ ಏಳು ಶಿಕ್ಷ್ಕರನ್ನುಅಮಾನತು ಮಾಡಲಾಗಿದೆ.

ಅಮಾನತುಗೊಂಡ ಶಿಕ್ಷಕರು: 1)ಎಸ್.ಎಸ್. ಕರವಿನಕೊಪ್ಪ ಸ.ಸ.ಪ್ರೌಢ ಶಾಲೆ ಕೆ.ಕೆ.ಕೊಪ್ಪ ತಾ:ಬೆಳಗಾವಿ 2)ಶ್ರೀ ವಿ.ಎಸ್.ಬಿಳಗಿ ಸ.ಸ.ಪ್ರೌಢ ಶಾಲೆ ಕೆ.ಕೆ.ಕೊಪ್ಪ ತಾ:ಬೆಳಗಾವಿ 3)ಶ್ರೀಮತಿ ಎಲ್.ಆರ್. ಮಹಾಜನಶೆಟ್ಟಿ ಸ.ಪ್ರೌಢ ಶಾಲೆ ಕೆ.ಕೆ.ಕೊಪ್ಪ ತಾ:ಬೆಳಗಾವಿ 4)ಶ್ರೀ ಎಮ್.ಎಸ್.ಅಕ್ಕಿ ಸ.ಶಿ ಸ.ಪ್ರೌಢ ಶಾಲೆ ಕೆ.ಕೆ.ಕೊಪ್ಪ ತಾ:ಬೆಳಗಾವಿ, 5)ಶ್ರೀ ಎ.ಎಚ್.ಪಾಟೀಲ ಸ.ಶಿ ಸ.ಪ್ರೌಢ ಶಾಲೆ ಕೆ.ಕೆ.ಕೊಪ್ಪ ತಾಬೆಳಗಾವಿ, 6)ಶ್ರೀ ಎನ್.ಎಮ್ ನಂದಿಹಳ್ಳಿ ಸ.ಶಿ ಸರಕಾರಿ ಪ್ರೌಢ ಶಾಲೆ ಹೊಸ ಇದ್ದಿಲಹೊಂಡ ತಾ: ಬೆಳಗಾವಿ 7)ಶ್ರೀಮತಿ ಎಸ್.ಸಿ.ದೂಳಪ್ಪನವರ ಸತಿ ಸರಕಾರಿ ಪ್ರೌಢ ಶಾಲೆ ಸೂಳೆಭಾವಿ ತಾ:ಬೆಳಗಾವಿ.

# ಸಿಡಿಲಿನ ಹೊಡೆತಕ್ಕೆ ಇಬ್ಬರು ಮಹಿಳೆಯರು ಸ್ಥಳದಲ್ಲೇ ಸಾವು

ಬಾಗಲಕೋಟೆ: ಸಿಡಿಲಿನ ಹೊಡೆತಕ್ಕೆ ಮನೆಯ ಮಣ್ಣಿನ ಮೇಲ್ಛಾವಣಿ ಕುಸಿದು ಇಬ್ಬರು ಮಹಿಳೆಯರು ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ಬಾದಾಮಿ ತಾಲೂಕಿನ ಜಾಲಿಹಾಳ ಗ್ರಾಮದಲ್ಲಿ ನಡೆದಿದೆ.



ಗುರುವಾರ ರಾತ್ರಿ 11.30ರ ಸುಮಾರಿಗೆ ಜೋರಾಗಿ ಸಿಡಿಲು ಬಡಿದು, ಮನೆಯ ಚಾವಣಿ ಒಮ್ಮಿಂದೊಮ್ಮೆಗೇ ಉದುರಿಬಿದ್ದು, ಯಂಕುಬಾಯಿ ಕುಲಕರ್ಣಿ (79), ಶಾರದಾ ಪತ್ತಾರ (61) ಪ್ರಾಣ ಕಳೆದುಕೊಂಡರು.

ಈ ಮಹಿಳೆಯರಿಬ್ಬರೂ ಅಕ್ಕಪಕ್ಕದ ಮನೆಯವರಾಗಿದ್ದು, ರಾತ್ರಿ ಒಂದೇ ಮನೆಯಲ್ಲಿ ಮಲಗುತ್ತಿದ್ದರು. ಶಾರದಾ ಪತ್ತಾರ ಅವರಿಗೆ ಬೇರೆ ಮನೆ ಇದ್ದರೂ ದಿನಂಪ್ರತಿ ಯಂಕುಬಾಯಿ ಕುಲಕರ್ಣಿ ಅವರ ಮನೆಗೇ ಬರುತ್ತಿದ್ದರು ಎನ್ನಲಾಗಿದೆ. ಆಗಲೇ ದುರಂತ ನಡೆದು ಇಬ್ಬರೂ ಮೃತಪಟ್ಟಿದ್ದಾರೆ.

ಗುರುವಾರ ರಾತ್ರಿ ಈ ಭಾಗದಲ್ಲಿ ಸಿಡಿಲು ಗುಡುಗಿನ ಅಬ್ಬರವಿತ್ತು. ಮಳೆಯೂ ಜೋರಾಗಿ ಬಿದ್ದಿತ್ತು. ಈ ವೇಳೆ ಮಣ್ಣಿನಿಂದ ಮಾಡಿದ ಮೇಲ್ಛಾವಣಿ ಸಿಡಿಲಿಗೆ ತತ್ತರಿಸಿ ಕುಸಿದುಬಿದ್ದಿದೆ. ಮೇಲ್ಛಾವಣಿಯ ಮಣ್ಣು ಮತ್ತು ಕಲ್ಲು ಕೆಳಗೆ ಮಲಗಿದ್ದ ಯಂಕುಬಾಯಿ ಮತ್ತು ಶಾರದಾ ಅವ್ರ ಮೇಲೆ ಬಿದ್ದಿದೆ. ಪರಿಣಾಮವಾಗಿ ಅವರು ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಕೂಡಲೇ ಸ್ಥಳೀಯರು ಧಾವಿಸಿ ರಕ್ಷಣೆಗೆ ಪ್ರಯತ್ನ ನಡೆಸಿದರು. ಕೊನೆಗೆ ಅಗ್ನಿಶಾಮಕ ದಳ ಸಿಬ್ಬಂದಿಗಳ ಸಹಾಯದಿಂದ ಶವಗಳನ್ನು ಹೊರತೆಗೆಯಲಾಗಿದೆ. ಬಾದಾಮಿ ತಾಲೂಕು ಆಸ್ಪತ್ರೆಯಲ್ಲಿ ಮೃತ ಮಹಿಳೆಯರ ಶವ ಪರೀಕ್ಷೆ ನಡೆದಿದ್ದು, ಕುಟುಂಬದವರಿಗೆ ಬಿಟ್ಟುಕೊಡಲಾಗಿದೆ. ಬಾದಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಬೈಲಹೊಂಗಲ: ತಾಲೂಕಿನ ಕೆಂಗಾನೂರ ಪಂಚಾಯತದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಅಕುಶಲ ಕೂಲಿಕಾರರಿಗೆ ಮತದಾನ ಜಾಗೃತಿಯನ್ನು ಮಾಡಲಾಯಿತು ಪ್ರತಿಜ್ಞಾ ವಿಧಿ, ಬ್ಯಾಡ್ಜ್ ವಿತರಣೆ ಮತ್ತು ಕರಪತ್ರ ಹಂಚು ಮೂಲಕ ಮತದಾನ ಕುರಿತು ಜಾಗೃತಿ ಮಾಡಲಾಯಿತು. ಗ್ರಾಪಂ ಅಭಿವೃದ್ಧಿ ಅಧಿಕಾರಿ ಮೇಘನಾ ಶೇಟ್ಟಿ, ಸಿದ್ದಾರೂಡ, ಜಗದೀಶ, ಈರಣ್ಣ ಹಾಗೂ ನರೇಗಾ ಕೂಲಿಕಾರರು ಹಾಜರಿದ್ದರು.

# ಮಲ್ಲೂರಿನಲ್ಲಿ ಏ. 14 ರಿಂದ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವ

ಬೈಲಹೊಂಗಲ: ಸಮೀಪದ ಸುಕ್ಷೇತ್ರ ಮಲ್ಲೂರ ಗ್ರಾಮದ ಶ್ರೀ ವೀರಭದ್ರೇಶ್ವರ ಹಾಗೂ ಶ್ರೀ ಬಾಳಯ್ಯ ಅಜ್ಜನವರ ಜಾತ್ರೆ, ನೂತನವಾಗಿ ನಿರ್ಮಿಸಿದ ಶ್ರೀ ಬಸವೇಶ್ವರ ದೇವಸ್ಥಾನದ ಉದ್ಘಾಟನೆಯ ಅಂಗವಾಗಿ ಏ. 14 ರಿಂದ 18 ರವರೆಗೆ ಸ್ಥಳೀಯ ತವಗಮಠದ ಬ್ರಹ್ಮಶ್ರೀ ಮಹಾಬಾಳಯ್ಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಸಡಗರ ಸಂಭ್ರಮದಿಂದ ಜಾತ್ರಾ ಮಹೋತ್ಸವ ಜರುಗಲಿದೆ.

ದಿ. 14 ರಂದು ಬೆಳಿಗ್ಗೆ 6–00 ಘಂಟೆಗೆ ಬೂದಿಹಾಳದ ವಾಸ್ತು ತಜ್ಞರಾದ ವೇ.ಮೂ. ಸಿ.ಜಿ.ಮಠದ ಅವರಿಂದ ದೇವಸ್ಥಾನದ ವಾಸ್ತುಶಾಂತಿ, ಹಣಬರಹಟ್ಟಿಯ ಪಟ್ಟದದೇವರು ಮಠದ ಪೂಜ್ಯ ಬಸವಲಿಂಗ ಶಿವಾಚಾರ್ಯರು ಅವರಿಂದ ಈಶ್ವರ, ನಂದಿ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ, ಶ್ರೀ ವೀರಭದ್ರೇಶ್ವರಿಗೆ ರುದ್ರಾಭಿಷೇಕ ಜರುಗಲಿವೆ. ಮುಂಜಾನೆ 10–30 ಕ್ಕೆ ಶ್ರೀ ಬಸವೇಶ್ವರ ದೇವಸ್ಥಾನದ ಉದ್ಘಾಟಣೆಯನ್ನು ಯಕ್ಕುಂಡಿಯ ಶ್ರೀ ಕುಮಾರೇಶ್ವರ ಸಂಸ್ಥಾನ ಹಿರೇಮಠದ ಪೂಜ್ಯ ಪಂಚಾಕ್ಷರ ಸ್ವಾಮೀಜಿ ನೆರವೇ–ರಿಸಲಿದ್ದಾರೆ.


ಮಧ್ಯಾಹ್ನ 12–30 ಕ್ಕೆ ಮಹಾಪ್ರಸಾದ ಜರುಗಲಿದ್ದು, ಅದೇ ದಿನ ಸಾಯಂಕಾಲ 4–00 ಘಂಟೆಗೆ ದೇವಸ್ಥಾನದ ಕಳಸಾರೋಹನ, ಸಾಯಂಕಾಲ 7–00 ಘಂಟೆಗೆ ಮಲ್ಲೂರು–ಮುನವಳ್ಳಿಯ ನಿತ್ಯಾನಂದ ಸತ್ಸಂಗಾಶ್ರಮದ ಪೂಜ್ಯ ಮುಕ್ತಾನಂದ ಸ್ವಾಮೀಜಿಗಳಿಂದ ಪ್ರವಚನ, ರಾತ್ರಿ 9–00 ಘಂಟೆಗೆ ಪಗಡಿ ಸ್ಪರ್ಧೆ ಜರುಗಲಿದೆ.



ದಿ. 15 ರಂದು ಸಾಯಂಕಾಲ 7–00 ಗಂಟೆಗೆ ಮುಕ್ತಾನಂದ ಶ್ರೀಗಳಿಂದ ಪ್ರವಚನ ಜರುಗಲಿದ್ದು ಹೊಸೂ–ರಿನ ಶ್ರೀಗುರು ಮಡಿವಾಳೇಶ್ವರ ಮಠದ ಪೂಜ್ಯ ಗಂಗಾಧರ ಶ್ರೀಗಳು ಸಾನಿಧ್ಯ ವಹಿಸಲಿದ್ದಾರೆ. ದಿ. 16 ರಂದು ಸಾಯಂಕಾಲ 4–00 ಘಂಟೆಗೆ ಗ್ರಾಮದ ದೇವಾನು ದೇವತೆಗಳ ಪಲ್ಲಕ್ಕಿ ಉತ್ಸವ, ರಾತ್ರಿ 7–00 ಘಂಟೆಗೆ ಪ್ರವಚನ, 9–00 ಗಂಟೆಗೆ ಮಹಾಪ್ರಸಾದ ನಡೆಯಲಿದೆ. ದಿ. 17 ರಂದು ಬೆಳಿಗ್ಗೆ 6–30 ಕ್ಕೆ ಗುಗ್ಗಳೋತ್ಸವ, 10–00 ಘಂಟೆಗೆ ಪಲ್ಲಕ್ಕಿ ಉತ್ಸವದೊಂದಿಗೆ ಪವಿತ್ರ ಮಲಪ್ರಭೆಗೆ ಮಹಾಪೂಜೆ ಜರುಗಲಿದೆ. ಮಧ್ಯಾಹ್ನ 12–30 ಕ್ಕೆ ಸಾಮೂಹಿಕ ವಿವಾಹಗಳು, ರಾತ್ರಿ 10–00 ಘಂಟೆಗೆ ಶ್ರೀ ಬಸವೇಶ್ವರ ಯುವ ತರುಣ ನಾಟ್ಯ ಸಂಘದಿಂದ ರೈತನ ಹೆಸರು ನಾಡಿನ ಉಸಿರು ಎಂಬ ಸಾಮಾಜಿಕ ನಾಟಕ ಪ್ರದರ್ಶನವಾಗಲಿದೆ.

ದಿ 18 ರಂದು ಗ್ರಾಮ ದೇವಿಯ–ರಿಗೆ ಉಡಿ ತುಂಬಿವ ಕಾರ್ಯಕ್ರಮ, ಸಾಯಂಕಾಲ ಸಾಂಸ್ಕೃತಿಕ ಕಾರ್ಯಕ್ರಮ–ಗಳು ಜರುಗಲಿವೆ ಎಂದು ಶ್ರೀ ಬಸವೇಶ್ವರ ಸೇವಾ ಸಮಿತಿಯು ಪ್ರಕಟಣೆಯಲ್ಲಿ ತಿಳಿಸಿದೆ.

# ಮದ್ಯದ ಅಮಲಿನಲ್ಲಿ ದೇವಸ್ಥಾನದ ಮುಂದೆಯೇ ಡಾನ್ಸ್ ಮಾಡಿದ ಎಎಸ್ಐ ಅಮಾನತು



ಇಡುಕ್ಕಿ: ಮದ್ಯದ ಅಮಲಿನಲ್ಲಿ ಸಮವಸ್ತ್ರದಲ್ಲೇ ದೇವಸ್ಥಾನದ ಮುಂದೆ ಕುಣಿದು ಕುಪ್ಪಳಿಸಿದ ಸಹಾಯಕ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಅನ್ನು ಅಮಾನತು ಮಾಡಿರುವ ಘಟನೆ ಕೇರಳದಲ್ಲಿ ನಡೆದಿದೆ.

ಸ್ಪೆಷಲ್ ಬ್ರಾಂಚ್ ವರದಿಯ ಪ್ರಕಾರ ಇಡುಕಿ ಜಿಲ್ಲೆಯ ಸಾಂಥನಪರದ ಎಎಸ್ಐ ಕೆ.ಪಿ. ಶಾಜಿ ಎಂಬುವರನ್ನು ಅಮಾನತು ಮಾಡಲಾಗಿದೆ. ಪೂಪ್ಪಾರ ಬಳಿ ದೇವಸ್ಥಾನದ ಉತ್ಸವದಲ್ಲಿ ಪೊಲೀಸ್ ಅಧಿಕಾರಿಯೊಬ್ಬರು ಡಾನ್ಸ್ ಮಾಡಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

ಬಳಿಕ ಸ್ಪೆಷಲ್ ಬ್ರಾಂಚ್ ತನಿಖೆ ನಡೆಸಿ ವರದಿ ಸಲ್ಲಿಸಿತ್ತು. ಅಮಾನತಿಗೆ ಮುಖ್ಯ ಕಾರಣವೆಂದರೆ, ಎಎಸ್ಐ ಕರ್ತವ್ಯದ ಸಮಯದಲ್ಲಿ ಸಮವಸ್ತ್ರದಲ್ಲೇ ಸಾರ್ವಜನಿಕರ ಮುಂದೆ ಡಾನ್ಸ್ ಮಾಡುತ್ತಿರುವುದು ಕಂಡುಬಂದಿದೆ. ಕರ್ತವ್ಯ ಲೋಪ ಎಸಗಿರುವುದು ವರದಿಯಲ್ಲಿ ಸ್ಪಷ್ಟವಾಗಿದೆ. ಮುನ್ನಾರ್ ಡಿವೈಎಸ್ಪಿ ನೀಡಿದ ವರದಿಯನ್ನು ಆಧರಿಸಿ ಎರ್ನಾಕುಲಂ ಡಿಐಜಿ, ಶಾಜಿಯನ್ನು ಅಮಾನತುಗೊಳಿಸಿದ್ದಾರೆ.

# ಸ್ವೀಪ ಸಮೀತಿಯ ನೆತ್ರತ್ವದಲ್ಲಿ ಮತದಾನ ಜಾಗ್ರತಿ ಕಾರ್ಯಕ್ರಮ



ಬೆಳಗಾವಿ: ಗ್ರಾಮ ಪ ಂ ಚಾ ಂ ು ್ ತ ಕೊಟಬಾಗಿ ಹಾಗೂ ತಾಲೂಕಾ ಸ್ವೀಪ ಸಮೀತಿಯ ನೆತ್ರತ್ವದಲ್ಲಿ ಮತದಾನ ಜಾಗ್ರತಿ ಕಾರ್ಯ ಕ್ರಮ. ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಕೊಟಬಾಗಿ ಗ್ರಾಮದಲ್ಲಿ. 18ವರ್ಷ ಮೇಲ್ಪಟ್ಟ ಎಲ್ಲಾರು ಮತದಾನ ಮಾಡಬೇಕು.

ಮತದಾನ ಮಾಡುವುದು ಪ್ರತಿಯೊಬ್ಬರ ಕರ್ತವ್ಯ, ತಮ್ಮ ಹಕ್ಕನ್ನು ಚಲಾಯಿಸುವ ಬಹುಮುಖ್ಯ ದಿನ ಹಾಗಾಗಿ ಮತದಾನದಿಂದ ಯಾರೊಬ್ಬರೂ ದೂರ ಉಳಿಯದೆ, ಮತದಾನ ಮಾಡಬೇಕು ಎಂದು ಜಾಗೃತಿ ಮೂಡಿಸಿದರು.

ಮತದಾರರಿಗೆ ಹಣದ ಆಮಿಷ ಒಡ್ಡುವದು ಕುಕ್ಕರ್ ಸೀರೆ ಮತ್ತು ಸರಾಯಿ ಇನ್ನಿತರ ವಸ್ತುಗಳಿಗೆ ನಿಮ್ಮ ಅಮೂಲ್ಯವಾದ ಮತವನ್ನು ಮಾರಿಕೊಳ್ಳಬೇಡಿ ಮತ್ತು ಮತದಾನ ದಿನ ಎಲ್ಲರೂ ಹಬ್ಬವನ್ನಾಗಿ ಆಚರಣೆ ಮಾಡಬೇಕೆಂದು ಕೊಟಬಾಗಿ ಗ್ರಾಮ ಪಂಚಾಯತ ಅಭಿವ್ರದ್ದಿ ಅಧಿಕಾರಿಗಳು ಮಾತನಾಡಿ ಮತದಾರರಿಗೆ ಜಾಗ್ರತಿ ಮೂಡಿಸಿದರು.

ನಂತರ ಅಂಗವಿಕಲ ಹಾಗೂ ವಿಕಲಚೇತನರಿಗೆ ವಿಶೆಷವಾಗಿ ವ್ಹೀಲ್ ಚೇರ್ ಹಾಗೂ ವಯೋವ್ರದ್ದರಿಗೆ ಮನೆಯಿಂದ ಮತದಾನ ಮಾಡುವ ಅವಕಾಶವನ್ನ ಜಿಲ್ಲಾಡಳಿತ ಸಕಲ ಸಿದ್ದತೆ ಮಾಡಿಕೊಂಡಿದೆ ಎಂದು ಮತದದಾರರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೊಟಬಾಗಿ ಗ್ರಾಮಸ್ತರು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾ ಶ್ರೀ ನಿರಂಜನ ಕುರಬೇಟ ಹಾಗೂ ತಾಲೂಕಾ ಸ್ವಿಪ ಸಮಿತಿಯ ಅಧಿಕಾರಿ ಶಿವನಾಯಿಕ ನಾಯಿಕ ಇನ್ನೂ ಮುಂತಾದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅರ್ಬನ ಕೋ.ಆಪ.ಬ್ಯಾಂಕ ಲಿ. ಪ್ರಸಕ್ತ ಸಾಲಿನಲ್ಲಿ 7 ಕೋಟಿ 10 ಲಕ್ಷ ರೂ. ಲಾಭ



ಬೈಲಹೊಂಗಲ: ಪಟ್ಟಣದ ದಿ.ಬೈಲಹೊಂಗಲ ಅರ್ಬನ ಕೋ.ಆಪ.ಬ್ಯಾಂಕ ಲಿ. ಪ್ರಸಕ್ತ ಸಾಲಿನಲ್ಲಿ 7 ಕೋಟಿ 10 ಲಕ್ಷ ರೂ. ಒಟ್ಟು ಲಾಭ ಗಳಿಸಿ ಬೆಳಗಾವಿ ಜಿಲ್ಲೆಗೆ ಅತ್ಯುತ್ತಮ ಸಾಧನೆ ಮಾಡಿದ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಬ್ಯಾಂಕಿನ ಅಧ್ಯಕ್ಷ ಡಾ.ಬಿ.ಎಚ್.ಮೆಟಗುಡ್ಡ ಹೇಳಿದರು.

ಅವರು ಗುರುವಾರ ಬ್ಯಾಂಕಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಟ್ಟು ದುಡಿಯುವ ಬಂಡವಾಳ 383.60 ಕೋಟಿ ರೂ, ಠೇವುಗಳು 340.15 ಕೋಟಿ ರೂ, 251.51 ಕೋಟಿ ರೂ. ಸಾಲ ವಿತರಿಸಿದೆ.

ನಿವ್ವಳ ಅನುತ್ಪಾದಕ ಸಾಲ 0.ಪ್ರತಿಶತ ಇದ್ದು ಬೆಳಗಾವಿ ಜಿಲ್ಲೆಯಲ್ಲಿಯೇ ಉತ್ತಮ ಸಾಧನೆ ಮಾಡಿದೆ. ಬ್ಯಾಂಕಿನ ಈ ಯಶಸ್ಸಿಗೆ ಸಾರ್ವಜನಿಕರು, ಸದಸ್ಯರು ಮೇಲೆ ಇಟ್ಟ ನಂಬಿಕೆ ಹಾಗೂ ಸಿಬ್ಬಂದಿ ಪರಿಶ್ರಮ ಕಾರಣ ಎಂದರು.

ಉಪಾಧ್ಯಕ್ಷ ವಿಶ್ವನಾಥ ಜವಳಿ, ಎಂ.ಎ.ನಾಯಕ, ಅಜ್ಜಪ್ಪ ಹೊಸೂರ, ಗುರು ಮೆಟಗುಡ್ಡ, ಬಸವರಾಜ ಮಡಿವಾಳರ, ಪ್ರೋ. ಸಿ.ಎ. ಮೆಟಗುಡ್ಡ, ಸತೀಶ ಮೆಟಗುಡ್ಡ, ಅನಿಲ ಮೆಟಗುಡ್ಡ, ಮಹಾಂತೇಶ ಮೆಟಗುಡ್ಡ, ಬಾಬು ಪತ್ತೆನ್ನವರ, ಬಸವರಾಜ ಸಾಲಿಮಠ, ಪ್ರಧಾನ ವ್ಯವಸ್ಥಾಪಕಿ ಸುನಂದಾ ಮೆಟಗುಡ್ಡ, ಎಸ್.ಜಿ.ಬೂದಯ್ಯನವರಮಠ, ಎಸ್.ಎಸ್.ಭಾಂವಿಹಾಳ, ಬಸವರಾಜ ಬೆಟಗೇರಿ, ರಾಜಶ್ರೀ ಬಿಳ್ಳೂರ, ಶಿವಾನಂದ ಭಾಂವಿಹಾಳ, ಶಾರದಾ ತುರಮರಿ, ಸಿ.ಸಿ.ಹೊಂಡದಕಟ್ಟಿ ಹಾಗೂ ಸಿಬ್ಬಂದಿ ಇದ್ದರು.

# ವಿಶ್ವ ಆರೋಗ್ಯ ದಿನಾಚರಣೆ



ಬೆಳಗಾವಿ: "ಎಲ್ಲರಿಗೂ ಆರೋಗ್ಯ" ಎಂಬ ಘೋಷವಾಕ್ಯದಂತೆ ಮನುಷ್ಯನಿಗೆ ಆರೋಗ್ಯವೇ ಭಾಗ್ಯಎಂಬುದು ನಿಜವಾದ ಸಂಪತ್ತು ಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎ.ಸಿ ಧಾರವಾಡ ಅವರು ಕೆಎಲ್ಇ ಆಸ್ಪತ್ರೆಯಲ್ಲಿ ನಡೆದ ವಿಶ್ವ ಆರೋಗ್ಯ ದಿನಾಚರನೆಯ ಕಾರ್ಯಕ್ರಮವನ್ನು ಉಧ್ಘಾಟಿಸುತ್ತ ಮಾತನಾಡುತ್ತಿದ್ದರು.

ಸ್ಪರ್ಧೆಯಿಂದ ಕೂಡಿರುವ ಇಂದಿನ ಜಗತ್ತಿನಲ್ಲಿ ನಾವು ಆರೋಗ್ಯಕರ ಹವ್ಯಾಸಗಳನ್ನು ಮರೆತಿ–ರುವದು ಆತಂಕಕಾರಿಯಾಗಿದೆ. ನಿಯಮಿತ ಊಟ ವ್ಯಾಯಾಮ ಸದ್ವಿಚಾರಗಳಂತಹ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡರೆ ರೋಗಮುಕ್ತ, ದಿರ್ಘಾಯುಸ್ಸನ್ನು ಹೊಂದಬಹುದು ಎಂದು ಕಿವಿಮಾತು ಹೇಳಿದರು.

ಮೆಡಿಶಿನ ವಿಭಾಗದ ಮುಖ್ಯಸ್ಥರಾದ ಡಾ.ಶ್ರೀನಿವಾಸ ಬಿ, ಅವರುಮಾತನಾಡುತ್ತ ನೈಸರ್ಗಿಕವಾಗಿ ಸಿಗುವ ಹಾಗೂ ಮನೆಯಲ್ಲೆ ದೊರೆಯುವ ಸಂಪನ್ಮೂಲಗಳಿಂದ ಮತ್ತು ಸರಳ ಜೀವನ ಶೈಲಿಯಿಂದ ಆರೋಗ್ಯಕರ ಜೀವನವನ್ನು ಹೊಂದಬಹುದಾಗಿದೆ.

ನಾವು ಸೇವಿಸುವ ಆಹಾರವೇ ಒಂದು ಮಹತ್ತರ ಔಷಧಿಯಾಗಿದ್ದು, ಅದನ್ನು ನಿಯಮಿತ ಪ್ರಮಾಣದಲ್ಲಿ ಸೇವಿಸಿ ಅದಕ್ಕೆತಕ್ಕಂತೆ ವ್ಯಾಯಾಮಗಳನ್ನು ಮೈಗೂಡಿಸಿಗೊಳ್ಳಬೇಕು. ಇದರಿಂದ ನಾವು ಆರೋಗ್ಯವಾಗಿದ್ದು ನಮ್ಮ ಸುತ್ತಮುತ್ತಲ ಜನರನ್ನು ಆರೋಗ್ಯವಂತರನ್ನಾಗಿಸಲು ಸಹಕಾ–ರಿಯಾಗಿದೆ ಎಂದರು.

ಆಸ್ಪತ್ರೆಯ ವೈದ್ಯರಾದ ಡಾ.ಶ್ರೀಕಾಂತ ಮೇತ್ರಿ ಅವರು ಮಾತನಾಡುತ್ತ, ಸರಕಾರವು ಜನರ ಆರೋಗ್ಯದ ಹಿತ ದೃಷ್ಟೀಯಿಂದ ಹಲವಾರು ಸರಕಾರಿ ಯೋಜನೆಗಳನ್ನು ಜಾರಿಗೆತಂದಿದ್ದು, ಅದರ ಸದುಪಯೋಗವನ್ನು ಎಲ್ಲರು ಪಡೆದುಕೊಳ್ಳಿ ಎಂದು ಸಲಹೆ ನೀಡಿದರು. ಜನ ಸಂಪರ್ಕಾಧಿಕಾರಿಯಾದ ಕೃಷ್ಣಾ ಗುಮಾಸ್ತೆ ಅವರು ಆರೋಗ್ಯದ ಮಹತ್ವದ ಬಗ್ಗೆ ತಿಳಿಸಿದರು.

ವೈದ್ಯಾಧಿಕಾರಿಯಾದ ಡಾ. ಮದನಡೊಂಗ್ರೆ ಮಾತನಾಡುತ್ತಾ, ಪ್ರತಿಯೊಬ್ಬ ಮನುಷ್ಯನು ಆರೋಗ್ಯಕರವಾಗಿ ಜೀವನ ನಡೆಸಲು ನಿಯಮಿತ ಊಟ, ವ್ಯಾಯಾಮ, ಆಚ–ಾರ, ವಿಚಾರ, ಧ್ಯಾನ ಮತ್ತು ಯೋಗಗಳನ್ನು ಚಟುವಟಿಕೆಗಳಲ್ಲಿ ಅಳವಡಿಸಿ ಕೊಂಡಲ್ಲಿ ಆರೋಗ್ಯಕರ ಜೀವನ ನಡೆಸಲುರಹದಾ–ರಿಯಾಗಿದೆ ಕರೆ ನೀಡಿದರು.ಆರೋಗ್ಯದ ಬಗ್ಗೆ ಸಮಸ್ಯಗಳಿದ್ದರೆ ಅವುಗಳನ್ನು ನಿರ್ಲಕ್ಷಿಸದೆ ವೈದ್ಯರನ್ನು ಭೇಟಿಯಾಗಿ ಚಿಕಿತ್ಸೆ ಪಡೆದು ಕೊಳ್ಳಿ ಎಂದು ವೈದ್ಯರಾದ ಡಾ.ನಾಸಿರ ಅವರು ಸಲಹೆ ನೀಡಿದರು.

ಈ ಸಂದರ್ಬದಲ್ಲಿ ಮೆಡಿಶಿನ ವಿಭಾಗದ ಮುಖ್ಯಸ್ಥರಾದ ಡಾ.ಶ್ರೀನಿವಾಸ ಬಿ, ಡಾ. ಆರ್.ಆರ್.ವಾಳ್ವೆಕರ, ಡಾ.ಶ್ರೀಕಾಂತ ಮೇತ್ರಿ, ಡಾ.ಯುವರಾಜ ಯಡ್ರಾವಿ, ಡಾ. ಶ್ರೀಕಾಂತ ರಾವರಿ ಹಾಗೂ ಆಸ್ಪತ್ರೆಯ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು, ಕಾರ್ಯಕ್ರಮವನ್ನು ಜನಸಂಪರ್ಕ ಅಧಿಕಾರಿಅರುಣ ನಾಗಣ್ಣವರ ನಿರೂಪಿಸಿ ವಂದಿಸಿದರು.

# ಶಿಕ್ಷಕಿ ಬೀನಾ ಅಣ್ಣಪ್ಪಾ ಚೌಗಲಾಗೆ ರಾಷ್ಟ್ರಮಟ್ಟದ ಪ್ರಶಸ್ತಿ



ಹುಕ್ಕೇರಿ: ತಾಲೂಕಿನ ಬೆಳವಿ ಸರಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕಿ ಬೀನಾ ಅಣ್ಣಪ್ಪಾ ಚೌಗಲಾ ಅವರಿಗೆ ರಾಷ್ಟ್ರಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಇತ್ತೀಚಿಗೆ ಗೋವಾ ರಾಜ್ಯದ ಹರಮಲ ಪಂಚ ಕರೋಶಿ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಸಮಾಜ ಕಲ್ಯಾಣ ಸೇವಾ ಪ್ರತಿಷ್ಠಾನ, ಹಾಗೂ ಬೆಳಗಾವಿ ಅಭಿವೃದ್ಧಿ ಪ್ರತಿಷ್ಠಾನ ಆಶ್ರಯದಲ್ಲಿ ಜರುಗಿದ ಕರ್ನಾಟಕ, ಗೋವಾ,ಗುಜರಾತ್, ಮಹಾರಾಷ್ಟ್ರ,ದಿಲ್ಲಿ ರಾಜ್ಯಗಳ ಒಳಗೊಂಡ ಕಾರ್ಯಕ್ರಮದಲ್ಲಿ ಶಿಕ್ಷಕಿ ಬೀನಾ ಚೌಗಲಾ ಅವರಿಗೆ ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

# ಆಧುನಿಕ ತಂತ್ರಜ್ಞಾನ ವರವೋ... ಶಾಪವೋ...?: ಹರಟೆ ಕಾರ್ಯಕ್ರಮ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 8 ಶನಿವಾರದಂದು ಸಾಯಂಕಾಲ 4–30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ 'ಆಧುನಿಕ ತಂತ್ರಜ್ಞಾನ ವರವೋ... ಶಾಪವೋ...?' ಎಂಬ ಹರಟೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಕವಿ ಪ್ರೊ. ಎಂ. ಎಸ್. ಇಂಚಲ ವಹಿಸಿದ್ದಾರೆ. ಚಾಲನೆಯನ್ನು ಹಿರಿಯ ಪತ್ರಕರ್ತ, ಲೇಖಕ ಎಲ್. ಎಸ್. ಶಾಸ್ತ್ರಿಯವರು ನೀಡಲಿದ್ದು ಆರ್. ಬಿ. ಕಟ್ಟಿ ಉಪಸ್ಥಿತರಿರುತ್ತಾರೆ.

ಪ್ರಾಸ್ತಾವಿಕ ನುಡಿಗಳನ್ನು ನಗೆಬರೆಹಗಾರ ಗುಂಡೇನಟ್ಟಿ ಮಧುಕರ ಆಡಲಿದ್ದಾರೆ. ನವಿಲೂರಿನ ತಾನಾಜಿ ನಿರೂಪಿಸಲಿದ್ದಾರೆ.

ಈ ಹರಟೆ ಕಾರ್ಯಕ್ರಮ ಪೂರ್ಣ ಮಹಿಳೆಯರಿಗಾಗಿ ಮೀಸಲಾಗಿದ್ದು ಸೂತ್ರಧಾರ ಸ್ಥಾನವನ್ನು ರಾಜೇಶ್ವರಿ ಹಿರೇಮಠ ಅಲಂಕರಿಸಲಿದ್ದಾರೆ. ಡಾ. ಭಾರತಿ ಮಠದ, ಪವಿತ್ರಾ ಹಿರೇಮಠ, ಇಂದಿರಾ ಮೋಟೆಬೆನ್ನೂರ ಇವರಿಗೆ ಆಧುನಿಕ ತಂತಜ್ಞಾನ ವರವಾಗಿದ್ದರೆ ಕೀರ್ತಿಶೇಖರ ಕಾಸರಗೋಡ, ಸುನಂದಾ ಎಮ್ಮಿ, ಸುನಿತಾ ದೇಸಾಯಿ ಇವರಿಗೆ ಶಾಪವಾಗಿದೆ.

ಅದು ಹೇಗೆಂದು ತಿಳಿದುಕೊಳ್ಳಲು ಕಾರ್ಯಕ್ರಮಕ್ಕೆ ಬನ್ನಿ ಎಂದು ವಿಜಯಕುಮಾರ ಹಣ್ಣಿಕೇರಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089